ಸಂಪುಟ : 9 ಸಂಚಿಕೆ 122 ಪುಟ : 4 ಬೆಲೆ: 3.00 ರವಿವಾರ ಜೂನ್ 16 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 122 Pages : 4 Price : 3.00 Sunday June 16 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ತೆರಿಗೆ ಹೆಚ್ಚಿಸಿದ ರಾಜ್ಯ ಸರ್ಕಾರ: ರಾಜ್ಯದಲ್ಲಿ ಪೆಟ್ರೋಲ್, ಡೀಸೆಲ್ ಬೆಲೆ ಏರಿಕೆ




■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪೆಟ್ರೋಲ್ ಹಾಗೂ ಡೀಸೆಲ್ ಮೇಲಿನ ತೆರಿಗೆಯನ್ನು ಹೆಚ್ಚಳ ಮಾಡಿ ರಾಜ್ಯ ಸರ್ಕಾರ ಶನಿವಾರ (ಜೂನ್ 15) ಆದೇಶ ಹೊರಡಿಸಿದೆ.

ಇದರಿಂದ ರಾಜ್ಯದಲ್ಲಿ ಪ್ರತಿ ಲೀಟರ್ ಪೆಟ್ರೋಲ್ ಬೆಲೆ 3.02 ರೂಪಾಯಿ ಹಾಗೂ ಪ್ರತಿ ಲೀಟರ್ ಡೀಸೆಲ್ ಬೆಲೆ 3 ರೂ. ಹೆಚ್ಚಳವಾಗಿದೆ.

ಪೆಟ್ರೋಲ್ ಚಿಲ್ಲರೆ ಮಾರಾಟ ದರ ಪ್ರತಿ ಲೀಟರ್‌ಗೆ ಇಂದಿನಿಂದ 102.85 ರೂ. ಹಾಗೂ ಡೀಸೆಲ್ ದರ ಪ್ರತಿ ಲೀಟರ್‌ಗೆ 88.93 ರೂ. ಆಗಲಿದೆ. ಈ ದರವು ಸಾಗಣೆ ವೆಚ್ಚದ ಆಧಾರದಲ್ಲಿ ರಾಜ್ಯದ ಬೇರೆ ಬೇರೆ ಪ್ರದೇಶಗಳಲ್ಲಿ ಸ್ವಲ್ಪ ಪ್ರಮಾಣದಲ್ಲಿ ವ್ಯತ್ಯಾಸವಾಗಲಿದೆ.

ದರ ಪರಿಷ್ಕರಣೆಯ ಬಳಿಕ ಬೆಂಗಳೂರಿನಲ್ಲಿ ಪ್ರತಿ ಲೀಟರ್ ಪೆಟ್ರೋಲ್ ಬೆಲೆ 99.84 ರೂ.ನಿಂದ 103ಗೆ ರೂ. ಏರಿಕೆಯಾಗಿದೆ. ಡೀಸೆಲ್ ಬೆಲೆ ಪ್ರತಿ ಲೀಟರ್‌ಗೆ 85.93 ರೂ.ನಿಂದ 89.20 ರೂ. ಗೆ ಏರಿಕೆ ಕಂಡಿದೆ.

ಸರ್ಕಾರ ಹೊರಡಿಸಿದ ರಾಜ್ಯ ಪತ್ರದಲ್ಲಿ ಪೆಟ್ರೋಲ್–ಡೀಸೆಲ್ ಬೆಲೆ ಏರಿಕೆ ಬಗ್ಗೆ ತಿಳಿಸಲಾಗಿದೆ. ಪೆಟ್ರೋಲ್ ಮೇಲಿನ ವ್ಯಾಟ್ ಅನ್ನು ಶೇ.25.92ರಿಂದ ಶೇ.29.84ಕ್ಕೆ ಹೆಚ್ಚಿಸಲಾಗಿದೆ. ಇದೇ ರೀತಿ ಡೀಸೆಲ್ ಮೇಲಿನ ವ್ಯಾಟ್ ಅನ್ನು ಶೇ.14.34ರಿಂದ ಶೇ.18.44ಕ್ಕೆ ಏರಿಕೆ ಮಾಡಲಾಗಿದೆ.

## ಪೆಟ್ರೋಲ್, ಡೀಸೆಲ್ ದರ ಏರಿಕೆ ರಾಜ್ಯದ ಜನತೆಗೆ ಮಾಡಿದ ದ್ರೋಹ


■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರ ಅವೈಜ್ಞಾನಿಕ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ರಾಜ್ಯದ ಆರ್ಥಿಕತೆಯನ್ನು ದಿವಾಳಿ ಮಾಡಿದ್ದು, ಈಗ ಪೆಟ್ರೋಲ್, ಡೀಸೆಲ್ ದರ ಏರಿಕೆ ಮಾಡಿ ರಾಜ್ಯದ ಜನತೆಗೆ ದ್ರೋಹ ಮಾಡಿದೆ ಎಂದು ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಈ ಕುರಿತು ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ರಾಜ್ಯ ಸರ್ಕಾರ ನಡೆಸಲು ಸಾಮಾನ್ಯ ಜನರ ಜೇಬಿಗೆ ಕತ್ತರಿ ಹಾಕುವ ಕೆಲಸ ಮಾಡಿದೆ. ನಾವು ಇದ್ದಾಗ ಡೀಸೆಲ್ ಬೆಲೆ 7 ರೂ ಕಡಿಮೆ ಮಾಡಿದ್ದೇವು, ಇವರು ನಾಲ್ಕು ರೂಪಾಯಿ ಹೆಚ್ಚಳ ಮಾಡಿದ್ದಾರೆ. ರಾಜ್ಯ ಸರ್ಕಾರದ ಖಜಾನೆ ಖಾಲಿಯಾಗಿರುವುದು ಇದರಿಂದ ಸ್ಪಷ್ಟವಾಗಿದೆ.

ಈಗಾಗಲೇ ವಿದ್ಯುತ್ ದರ, ಮೋಟರ್ ವೆಹಿಕಲ್ ದರ ಏರಿಕೆ ಸಾಮಾನ್ಯ ಜನರಿಗೆ ನೇರ ಬರೆ ಎಳೆದಿದ್ದಾರೆ. ಬಜೆಟ್ ನಲ್ಲಿ ಘೋಷಣೆ ಮಾಡದೇ, ಈಗ ಈ ರೀತಿ ಪೆಟ್ರೋಲ್ ಡೀಸೆಲ್ ದರ ಏರಿಸಿರುವುದು ಒಂದು ರೀತಿಯಲ್ಲಿ ಜನತೆಗೆ ದ್ರೋಹ ಮಾಡಿದಂತೆ. ನಾವು ಇದನ್ನು ಉಗ್ರವಾಗಿ ಖಂಡಿಸುತ್ತೇವೆ. ಕೂಡಲೆ ಸರ್ಕಾರ ಆದೇಶ ವಾಪಸ್ ಪಡೆಯಬೇಕು ಎಂದು ಅವರು ಆಗ್ರಹಿಸಿದ್ದಾರೆ.

## ಶರಣ ಕುರುಬ ಗೊಲ್ಲಾಳೇಶ್ವರ ಕುರಿತು ಉಪನ್ಯಾಸ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜೂನ್ 16ರ ಬೆಳಿಗ್ಗೆ 11ಕ್ಕೆ ನಡೆಯಲಿರುವ ಬಸವದಳದ 1598ನೇ ಶರಣ ಸಂಗಮದಲ್ಲಿ ಶರಣ ಕುರುಬ ಗೊಲ್ಲಾಳೇಶ್ವರ (ವೀರಗೊಲ್ಲಾಳ) ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಅನುಭಾವಿಗಳಾದ ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ಇವರು ಉಪನ್ಯಾಸ ಮಾಡುವರು. ಕಾರಣ, ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

### ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರಿಂದ ಪತ್ರಿಕಾಗೋಷ್ಠಿ

# ಶೀಘ್ರವೇ ಬಾಕಿಯಿರುವ ಪ್ರಕರಣಗಳ ಇತ್ಯರ್ಥ



■ವಿಜಯಸಾಕ್ಷಿ ಸುದ್ದಿ, ಗದಗ

ಲೋಕಾಯುಕ್ತ ಸಂಸ್ಥೆಯಲ್ಲಿ ಗದಗ ಜಿಲ್ಲೆಗೆ ಸಂಬಂಧಿಸಿದಂತೆ ಹಲವಾರು ಪ್ರಕರಣಗಳು ಈಗಾಗಲೇ ನೋಂದಣಿಯಾಗಿವೆ. ಅವುಗಳಲ್ಲಿ 40 ಪ್ರಕರಣಗಳನ್ನು ಆಯ್ಕೆ ಮಾಡಿಕೊಂಡು ಅಂತಿಮ ತೀರ್ಮಾನ ಕೈಗೊಳ್ಳಲು ವಿಚಾರಣೆ ನಡೆಸಲಾಗಿ, 22 ದೂರಿನ ಪ್ರಕರಣಗಳ ತೀರ್ಮಾನ ಮಾಡಿ ಆದೇಶ ಹೊರಡಿಸಲಾಗಿದೆ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಹೇಳಿದರು.

ಗದಗ ಜಿಲ್ಲಾಡಳಿತ ಭವನದಲ್ಲಿ ಶನಿವಾರ ಜರುಗಿದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು, 40 ಪ್ರಕರಣಗಳಲ್ಲಿ ಉಳಿದ ಪ್ರಕರಣಗಳನ್ನು ಶೀಘ್ರದಲ್ಲಿಯೇ ಹೆಚ್ಚಿನ ತನಿಖೆ ನಡೆಸಿ ಅಂತಿಮಗೊಳಿಸಲಾಗುವುದು ಎಂದರು.

ಎರಡು ದಿನಗಳ ಕಾಲ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡಿದ್ದು, ಸಾರ್ವಜನಿಕರಿಂದ 113 ದೂರು/ಅಹವಾಲುಗಳನ್ನು ಸ್ವೀಕರಿಸಲಾಗಿದೆ. ಇವುಗಳಲ್ಲಿ ಕೆಲವು ನ್ಯಾಯಾಲಯದಲ್ಲಿ ದಾಖಲಾದ ಪ್ರಕರಣಗಳು ಸೇರಿವೆ. ಸಾರ್ವಜನಿಕರ ಹಲವಾರು ದೂರುಗಳನ್ನು ಸ್ವೀಕರಿಸಿ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸಲ್ಲಿಸಿ ಸಮಯಾವಕಾಶ ನಿಗದಿಪಡಿಸಿ, ಇತ್ಯರ್ಥಪಡಿಸಿ ಲೋಕಾಯುಕ್ತ ಸಂಸ್ಥೆಗೆ ವರದಿ ನೀಡಲು ಸೂಚಿಸಲಾಗಿದೆ.

> ಪತ್ರಕರ್ತರ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಅವರು, ಉಪಲೋಕಾಯುಕ್ತರಾಗಿ ನಾನು ಕಳೆದ ಎರಡು ವರ್ಷ ಮೂರು ತಿಂಗಳಿಂದ ಕರ್ತವ್ಯ ನಿರ್ವಹಿಸುತ್ತಿದ್ದೇನೆ. ಲೋಕಾಯುಕ್ತ ಸಂಸ್ಥೆಯಲ್ಲಿ 18 ಸಾವಿರಕ್ಕೂ ಅಧಿಕ ಪ್ರಕರಣಗಳು ನೋಂದಣಿಯಾಗಿ ವಿವಿಧ ಹಂತದ ತನಿಖೆಯಲ್ಲಿವೆ. ಸಂಸ್ಥೆಯಲ್ಲಿ ಶೇ 60ರಷ್ಟು ಅಧಿಕಾರಿ/ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅಲ್ಲದೇ ಉಪಲೋಕಾಯುಕ್ತರ ಇನ್ನೊಂದು ಹುದ್ದೆ ಖಾಲಿ ಇದೆ ಎಂದರು.

ನಿಗದಿಪಡಿಸಿದ ಸಮಯಾವಕಾಶದೊಳಗೆ ಸಮಸ್ಯೆ ಇತ್ಯರ್ಥಪಡಿಸದೇ ಇದ್ದಲ್ಲಿ ಪ್ರಕರಣವನ್ನು ದಾಖಲಿಸಿ ತನಿಖೆ ನಡೆಸಲಾಗುವುದು ಎಂದು ಹೇಳಿದರು.

ದೂರು ಸ್ವೀಕಾರವಾದ ತಕ್ಷಣ ಪ್ರಾಥಮಿಕ ವರದಿ ತರಿಸಿಕೊಂಡು ಎದುರುದಾರರು ತಪ್ಪಿತಸ್ಥರೆಂದು ಕಂಡುಬಂದಲ್ಲಿ ನೋಟೀಸ್ ಜಾರಿಗೊಳಿಸುವ ಮೂಲಕ ವಿಚಾರಣೆ ನಡೆಸಲಾಗುವುದು. ಅಧಿಕಾರಿಗಳು ಕರ್ತವ್ಯ ಲೋಪಕ್ಕೆ ಆಸ್ಪದ ನೀಡದಂತೆ ಕೆಲವು ಪ್ರಕರಣಗಳಲ್ಲಿ ಸೂಚನೆ ನೀಡಲಾಗಿದೆ. ಹಲವು ಅಧಿಕಾರಿಗಳಿಗೆ ತಪ್ಪು ಮರುಕಳಿಸಬಾರದೆಂದು ಎಚ್ಚರಿಕೆ ನೀಡಲಾಗಿದೆ. ತಪ್ಪು ತಿದ್ದಿಕೊಳ್ಳದಿದ್ದಲ್ಲಿ ಶಿಸ್ತು ಕ್ರಮ ಅನಿವಾರ್ಯವೆಂದು ತಿಳಿಸಲಾಗಿದೆ ಎಂದರು.

ಈವರೆಗೆ ಒಟ್ಟು 13 ಜಿಲ್ಲೆಗಳಲ್ಲಿ ಪ್ರವಾಸ ಕೈಗೊಂಡು



ಹಲವಾರು ಸಾರ್ವಜನಿಕ ಅಹವಾಲುಗಳನ್ನು ಸ್ವೀಕರಿಸಲಾಗಿದೆ. ಕೆಲವು ಪ್ರಕರಣಗಳಿಗೆ ವಿಚಾರಣೆ ನಡೆಸಿ ತೀರ್ಮಾನವನ್ನು ಕೈಗೊಳ್ಳುವ ಮೂಲಕ ಜನಸಾಮಾನ್ಯರ ವಿಶ್ವಾಸಾರ್ಹತೆ ಗಳಿಸುವಲ್ಲಿ ಲೋಕಾಯುಕ್ತ ಸಂಸ್ಥೆ ಮಹತ್ವ ಪಡೆದಿದೆ ಎಂದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಸಂಪನ್ಮೂಲ ವ್ಯಕ್ತಿ ಪ್ರಕಾಶ ನಾಡಗೇರ, ಉಪನಿಬಂಧಕರಾದ ಅಮರನಾರಾಯಣ ಕೆ., ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿಎಂ ಪಾಟೀಲ, ಗದಗ ಲೋಕಾಯುಕ್ತ ಎಸ್ಪಿ ಸತೀಶ ಚಿಟಗುಬ್ಬಿ, ಡಿವೈಎಸ್ಪಿ ವಿಜಯ ಬಿರಾದಾರ ಉಪಸ್ಥಿತರಿದ್ದರು.

### ಲೋಕಾಯುಕ್ತ ಉಪನಿಬಂಧಕ ಅಮರ ನಾರಾಯಣ ಕೆ ಅವರಿಂದ ಸಾರ್ವಜನಿಕ ಅಹವಾಲು ಸ್ವೀಕಾರ

# ಪ್ರಕರಣಗಳ ವಿಲೇವಾರಿ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾಡಳಿತ ಭವನದ ಮುಖ್ಯ ಸಭಾಂಗಣದಲ್ಲಿ ಲೋಕಾಯುಕ್ತ ಉಪನಿಬಂಧಕ ಅಮರ ನಾರಾಯಣ ಕೆ ಅವರಿಂದ ಸಾರ್ವಜನಿಕ ಅಹವಾಲು ಸ್ವೀಕಾರ, ಕುಂದುಕೊರತೆ, ದೂರು ವಿಚಾರಣೆ ಹಾಗೂ ಪ್ರಕರಣ ವಿಲೇವಾರಿ ಸಭೆ ಜರುಗಿತು.

ಗದಗ ನಗರದ ನಾಗೇಶ ಕುರಡಿಕೇರಿ ತಮ್ಮ ಮನೆಯ ಹತ್ತಿರ ಕೈಮಗ್ಗ ಯಂತ್ರವು ರಾತ್ರಿಯಿಡೀ ಚಾಲ್ತಿಯಲ್ಲಿರುವುದರಿಂದ ರಾತ್ರಿ ನೆಮ್ಮದಿಯಿಂದ ಇರಲಾಗುತ್ತಿಲ್ಲ ಎಂದು ದೂರು ನೀಡಿದರು. ಅದಕ್ಕೆ ಲೋಕಾಯುಕ್ತ ಉಪನಿಬಂಧಕರು ಜವಳಿ ಮತ್ತು ಕೈಮಗ್ಗ ಇಲಾಖೆಯ ಅಧಿಕಾರಿಗಳಿಗೆ ಸರ್ಕಾರದ ನಿಯಮದನ್ವಯ ರಾತ್ರಿ ಎಲ್ಲಿಯವರೆಗೆ ಯಂತ್ರ ಚಾಲಾಯಿಸಲು ಅವಕಾಶವಿದೆಯೋ ಅಲ್ಲಿಯವರಗೆ ಮಾತ್ರ ಅವಕಾಶ ಕಲ್ಪಿಸಿ ಎಂದು ಸೂಚಿಸಿದರು.

ಗದಗ ತಾಲೂಕಿನ ಬಸಾಪೂರ ಗ್ರಾಮದ ಹನುಮಂತ ವಡ್ಡರ ಅವರ ಮನೆ ಸುತ್ತಮುತ್ತ ಕಲ್ಲು ಒಡೆದು ಅಕ್ರಮವಾಗಿ ಗಣಿಗಾರಿಕೆ ಮಾಡುವುದರಿಂದ ಅಲ್ಲಿರುವ ಜನರಿಗೆ ತೆ–ಊಂದರೆಯಾಗುತ್ತಿದೆ. ಈ ಕುರಿತು ಅನೇಕ ಬಾರಿ ಪೊಲೀಸ್ ಇಲಾಖೆಗೆ ದೂರು ನೀಡಿದರೂ ಕ್ರಮ ಕೈಗೊಂಡಿಲ್ಲ ಎಂದು ದೂರು ನೀಡಿದರು. ಲೋಕಾಯುಕ್ತ ಉಪನಿಬಂಧಕರು, ಗಣಿ ಮತ್ತು ಭೂ ವಿಜ್ಞಾನ ಅಧಿಕಾರಿಗಳಿಗೆ ತಕ್ಷಣ



ಸ್ಥಳ ಪರಿಶೀಲಿಸಿ ಅಂತಹ ಅಕ್ರಮ ಗಣಿಗಾರಿಕೆ ನಡೆಯದಂತೆ ಕ್ರಮ ತೆಗೆದುಕೊಳ್ಳಬೇಕು ಎಂದು ನಿರ್ದೇಶಿಸಿದರು.

ನಂತರ ಚಾಂದಸಾಬ ಕುತುದುದ್ದಿನ ಮುಳಗುಂದ, ಹಲವಾರು ಬಾರಿ ಮಾಹಿತಿ ಹಕ್ಕು ಅರ್ಜಿಯನ್ನು ಶಿರಹಟ್ಟಿಯ ಪಟ್ಟಣ ಪಂಚಾಯತಗೆ ನೀಡಿದ್ದು, ಯಾವುದೇ ರೀತಿಯ ಪ್ರತಿಕ್ರಿಯೆ ನೀಡಿಲ್ಲ ಎಂದು ದೂರು ನೀಡಿದರು. ಅದಕ್ಕೆ ಉಪನಿಬಂಧಕರು, ಈ ವಿಷಯವು ಮಾಹಿತಿ ಹಕ್ಕಿನ ಅಯೋಗಕ್ಕೆ ಸಂಬಂಧಿಸಿದ್ದು, ನಮ್ಮ ವ್ಯಾಪ್ತಿಗೆ ಬರುವುದಿಲ್ಲ. ಸರಿಯಾದ ಮಾಹಿತಿ ದೊರೆಯದಿದ್ದರೆ ಮೇಲ್ಮನವಿ ಹೋಗಲು ದೂರುದಾರನಿಗೆ ತಿಳಿಸಿದರು.

ಗದಗ ನಗರದ 35ನೇ ವಾರ್ಡಿನ ವಿಶ್ವೇಶ್ವರಯ್ಯ ನಗರದ ಕಾಶೀನಾಥ ಬೀಳಗಿಯವರು ತಮ್ಮ ವಾರ್ಡ್‌ನಲ್ಲಿ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವಂತೆ ಹಲವಾರು ಬಾರಿ ನಗರಸಭೆಗೆ ಮನವಿ ನೀಡಿದರೂ ಯಾವುದೇ ಪ್ರಯೋಜನವಾಗಿಲ್ಲ ಎಂದು ದೂರು ನೀಡಿದರು. ನಗರಸಭೆಯ ಪೌರಾಯುಕ್ತರಿಗೆ ದೂರನ್ನು ಗಂಭಿರವಾಗಿ ಪರಿಗಣಿಸಿ, ಆದಷ್ಟು ಬೇಗ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕೆಂದು ಸೂಚಿಸಿದರು.

ಹರ್ಲಾಪುರ ಗ್ರಾಮದ ಶಿವಾನಂದ ಪಟ್ಟೇದ ತಮ್ಮ ಗ್ರಾಮದಲ್ಲಿ ನಿರ್ಮಾಣವಾದ ವಸತಿ ನಿಲಯವು ಕ್ರಿಯಾಯೋಜನೆ ಹಾಗೆ ಕಾಮಗಾರಿ ನಡೆದಿಲ್ಲ ಎಂದು ಆರ್.ಡಿ.ಪಿ.ಆರ್ ಇಲಾಖೆಯ ಮೇಲೆ ದೂರು ನೀಡಿದರು. ಅದಕ್ಕೆ ಉಪನಿಬಂಧಕರು ಕಾಮಗಾರಿಯನ್ನು ಪರೀಶಿಲಿಸಿ ಪ್ರಾಥಮಿಕ ವರದಿ ನೀಡಲು ಸೂಚಿಸಿದರು.

> ಹೀರೆಹಾಳ ಗ್ರಾಮದ ಶಂಕರಗೌಡ ವೀರಣ್ಣಗೌಡ ಅವರು ತಮ್ಮ ಊರಿನ ಸೊಸೈಟಿಯಲ್ಲಿ ರೈತರಿಗೆ ಸಾಲ ನೀಡುವಲ್ಲಿ ಅವ್ಯವಹಾರ ಮಾಡಿದ್ದು, ಯಾವುದೇ ರೀತಿಯ ಖಾತೆಗಳಾಗಲಿ, ಭದ್ರತಾ ಠೇವಣಿಗಳು ಇರುವುದಿಲ್ಲ ಎಂದು ದೂರು ನೀಡಿದರು. ಅದಕ್ಕೆ ಉಪನಿಬಂಧಕರು ಸಂಬಂಧಿಸಿದ ಅಧಿಕಾರಿಗಳಿಗೆ ಕೂಡಲೇ ಪರಿಶೀಲಿಸಿ ವರದಿ ನೀಡಬೇಕೆಂದು ಸೂಚಿಸಿದರು.

ಗದಗ ನಗರದ ಪ್ರಕಾಶ ಕಲ್ಮನಿ, ಬಾಬು ಜಗಜೀವನರಾವ್ ಅಭಿವೃದ್ಧಿ ನಿಗಮದಿಂದ ಒಂದೇ ಸಮುದಾಯದವರಿಗೆ 250 ಮನೆಗಳನ್ನು ನೀಡಿದ್ದು, ಉಳಿದವರಿಗೆ ನೀಡಿಲ್ಲ ಎಂದು ದೂರು ನೀಡಿದರು. ದೂರು ಆಲಿಸಿದ ಉಪನಿಬಂಧಕರು, ಬಾಬು ಜಗಜೀವನರಾವ್ ಅಭಿವೃದ್ಧಿ ನಿಗಮದ ವ್ಯವಸ್ಥಾಪಕರಿಗೆ ಪ್ರಕರಣ ಬಗ್ಗೆ ಸರಿಯಾಗಿ ಪರಿಶೀಲಿಸಿ ವರದಿ ನೀಡಲು ಆದೇಶಿಸಿದರು.

ಈ ಸಂದರ್ಭದಲ್ಲಿ ಉಪಲೋಕಾಯುಕ್ತರ ಆಪ್ತಕಾರ್ಯದರ್ಶಿ ಕಿರಣ ಪಿಎಂ ಪಾಟೀಲ, ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ ಸೇರಿದಂತೆ ಇತರೆ ಅಧಿಕಾರಿಗಳು ಇದ್ದರು.

## ಗದುಗಿನಲ್ಲಿ ಬೃಹತ್ ಕೈಗಾರಿಕೆ ಸ್ಥಾಪಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕೇಂದ್ರ ಉಕ್ಕು ಹಾಗೂ ಭಾರೀ ಕೈಗಾರಿಕಾ ಸಚಿವರಾಗಿ ಅಧಿಕಾರ ಸ್ವೀಕರಿಸಿದ ಮೇಲೆ ಮೊದಲ ಬಾರಿಗೆ ರಾಜ್ಯಕ್ಕೆ ಆಗಮಿಸಿದ ಎಚ್.ಡಿ. ಕುಮಾರಸ್ವಾಮಿ ಅವರನ್ನು ರಾಜ್ಯ ಜೆಡಿಎಸ್ ವಕ್ತಾರ ವೆಂಕನಗೌಡ ಗೋವಿಂದಗೌಡ್ರ ಭೇಟಿಯಾಗಿ ಸನ್ಮಾನಿಸಿದರು.

ಬೆಂಗಳೂರಿನ ಅವರ ನಿವಾಸದಲ್ಲಿ ಭೇಟಿಯಾಗಿ ಗದಗ ಜಿಲ್ಲೆ ಅಭಿವೃದ್ಧಿ ಹೊಂದದ ಜಿಲ್ಲೆಯಾಗಿಯೇ ಉಳಿದಿದ್ದು, ಜಿಲ್ಲೆಯ ಯುವಕರು ಉದ್ಯೋಗ ಅರಸಿಕೊಂಡು ಬೇರೆ ಬೇರೆ ಊರುಗಳಿಗೆ ವಲಸೆ ಹೋಗುವ ಪರಿಸ್ಥಿತಿ ಇದೆ. ಮಕ್ಕಳಿಂದ ದೂರವಾದ ಪಾಲಕರು ಖಿನ್ನತೆಗೆ ಒಳಗಾಗುತ್ತಿದ್ದಾರೆ. ಅತ್ತ ಕಲ್ಯಾಣ ಕರ್ನಾಟಕಕ್ಕೂ ಸೇರದೆ ಇತ್ತ ಮುಂಬೈ ಕರ್ನಾಟಕದ ಭಾಗವೂ ಆಗದೆ ಅಭಿವೃದ್ಧಿ ಮರೀಚಿಕೆಯಾಗಿದೆ.



ಜಿಲ್ಲೆಯಲ್ಲಿ ಎಲ್ಲ ಸಂಪನ್ಮೂಲಗಳು ಲಭ್ಯವಿದ್ದರೂ ಕೂಡ ಯಾವುದೇ ಅಭಿವೃದ್ಧಿಯಾಗಲಿ, ವಿಶೇಷ ಕೈಗಾರಿಕೆಗಳಾಗಲಿ ಇದುವರೆಗೆ ಸ್ಥಾಪನೆಯಾಗಿಲ್ಲ ಎಂದು ವಿವರಿಸಿದರು.

ಗದಗ ಜಿಲ್ಲೆ ಅಭಿವೃದ್ಧಿ ಹೊಂದಬೇಕು ಹಾಗೂ ಯುವಕರಿಗೆ ಉದ್ಯೋಗ ಸೃಷ್ಟಿಯಾಗಬೇಕೆಂದರೆ, ಬೃಹತ್ ಕೈಗಾರಿಕೆಗಳ ಸ್ಥಾಪನೆ ಆಗಬೇಕು. ಇದಕ್ಕೆ ವಿಶೇಷ ಕಾಳಜಿ ವಹಿಸಿ ಕ್ರಮ ಕೈಗೊಳ್ಳಬೇಕು ಎಂದು ವೆಂಕನಗೌಡ ಆರ್.ಗೋವಿಂದಗೌಡ್ರ ಕೇಂದ್ರ ಸಚಿವರಾದ ಎಚ್.ಡಿ. ಕುಮಾರಸ್ವಾಮಿ ಅವರಲ್ಲಿ ಮನವಿ ಮಾಡಿಕೊಂಡರು.

ಸಚಿವ ಎಚ್.ಡಿ. ಕುಮಾರಸ್ವಾಮಿ ಮನವಿ ಸ್ವೀಕರಿಸಿ, ಯುವಕರಿಗೆ ಉದ್ಯೋಗ ಸೃಷ್ಟಿ ಮಾಡುವುದು ಸರ್ಕಾರದ ಹಾಗೂ ನನ್ನ ಗುರಿ. ಈ ಬಗ್ಗೆ ಗಮನಹರಿಸಿ ಕ್ರಮ ಕೈಕೊಳ್ಳುತ್ತೇವೆ ಎಂದು ಭರವಸೆ ನೀಡಿದರು.

# ಶ್ರೀರಾಮ ಸೇನೆಯ ಕಾರ್ಯಕರ್ತರು ಪೊಲೀಸ್ ವಶಕ್ಕೆ, ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಗದಗ

ತೋಂಟದಾರ್ಯ ಮಠದ ರಥ ಬೀದಿಯಲ್ಲಿ ಆಕ್ರಮವಾಗಿ ವ್ಯಾಪಾರ-ವಹಿವಾಟು ನಡೆಸುತ್ತಿರುವ ವರ್ತಕರನ್ನು ತೆರವುಗೊಳಿಸುವಂತೆ ಆಗ್ರಹಿಸಿ ಉಪಲೋಕಾಯುಕ್ತರಿಗೆ ಮನವಿ ಸಲ್ಲಿಸಲು ಯತ್ನಿಸಿದ ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ ಸೇರಿದಂತೆ 13 ಜನರನ್ನು ಶನಿವಾರ ಪೊಲೀಸರು ವಶಕ್ಕೆ ಪಡೆದಿದ್ದಾರೆನ್ನಲಾಗಿದೆ.

ಶನಿವಾರ ಮುಂಜಾನೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಉಪಲೋಕಾಯುಕ್ತ



ಕೆ.ಎನ್. ಫಣೀಂದ್ರ ಅವರಲ್ಲಿ ಆಕ್ರಮ ವ್ಯಾಪಾರಸ್ಥರನ್ನು ತೆರವುಗೊಳಿಸುವಂತೆ ಆಗ್ರಹಿಸಿ ಮನವಿ ಸಲ್ಲಿಸಲು ಶ್ರೀರಾಮ ಸೇನೆಯ ಕಾರ್ಯಕರ್ತರು ಮುಂದಾಗಿದ್ದಾಗ, ಪೊಲೀಸರು ಅವರನ್ನು ತಡೆದು, ಮಲ್ಲಸಮುದ್ರ ಗ್ರಾಮದ ಪೊಲೀಸ್ ಕವಾಯತ್ ಮೈದಾನಕ್ಕೆ ರವಾನಿಸಿದ್ದಾರೆ ಎನ್ನಲಾಗಿದೆ.

ಶ್ರೀರಾಮ ಸೇನೆಯ ರಾಜ್ಯ ಕಾರ್ಯದರ್ಶಿ ರಾಜೂ ಖಾನಪ್ಪನವರ, ಮಹೇಶ ರೋಖಡೆ, ಕುಮಾರ ನಡಗೇರಿ, ವೆಂಕಟೇಶ ದೊಡ್ಡಮನಿ, ಕಿರಣ ಹಿರೇಮಠ, ಸೋಮು ಗುಡಿ, ಮಂಜುನಾಥ ತುಪ್ಪದ, ಸದಾನಂದಸಿಂಗ್ ಗುರ್ಲಹೊಸೂರ, ಸಂಜೀವ ಚಟ್ನಿ, ಪ್ರಮೋದಸಿಂಗ್ ರಜಪೂತ, ಈರಣ್ಣ ಹೊಸಮನಿ, ಸೋಮು ಗೌರಿ, ಲೋಕೇಶ ರಾಮಜಿ ಇವರನ್ನು ಪೊಲೀಸರು ವಶಕ್ಕೆ ಪಡೆದು, ರಾತ್ರಿಯ ಹೊತ್ತಿಗೆ ಬಿಡುಗಡೆ ಮಾಡಿದ್ದಾರೆ ಎಂದು ತಿಳಿದುಬಂದಿದೆ.

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ
–ಸುಭಾಷಿತ

## ಸಂಪಾದಕೀಯ

# ತೈಲ ಬೆಲೆ ಏರಿಕೆ ಬರೆ ಎಳೆದ ಬಡವರ ಗ್ಯಾರಂಟಿ ಸರಕಾರ

ಎನ್ ಡಿಎ ನೇತೃತ್ವದ ಕೇಂದ್ರ ಸರಕಾರದ ಬೆಲೆ ಏರಿಕೆಯ ವಿರುದ್ಧ ವಾಗ್ದಾಳಿ ನಡೆಸುತ್ತಲೆ, ಗ್ಯಾರಂಟಿ ಕಾರ್ಯಕ್ರಮಗಳ ಮೂಲಕ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರಕಾರ ಈಗ ತಾನೆ ಬೆಲೆ ಏರಿಕೆಗೆ ಮುಂದಾಗಿದೆ. ಲೋಕಸಭೆ ಚುನಾವಣೆಯಲ್ಲಿ ಜನ ಕಾಂಗ್ರೆಸ್ ತಿರಸ್ಕರಿಸಿದ ಕಾರಣಕ್ಕೆ ಅವರ ಮೇಲೆ ಪ್ರತಿಕಾರ ತೀರಿಸಿಕೊಳ್ಳುವಂತೆ ಪೆಟ್ರೋಲ್ ಮತ್ತು ಡಿಸೇಲ್ ಬೆಲೆಯಲ್ಲಿ ಏಕಾಏಕಿ ಬೆಲೆ ಏರಿಕೆ ಮಾಡಲಾಗಿದೆ.

ರಾಜ್ಯದಲ್ಲಿ ಪ್ರತಿ ಲೀಟರ್ ಪೆಟ್ರೋಲಿಗೆ 3 ರೂಪಾಯಿ ಹಾಗೂ ಡಿಸೇಲ್ ಗೆ 3.5 ರೂ. ದರ ಹೆಚ್ಚಳ ಮಾಡಿ ಸರಕಾರ ಆದೇಶ ಹೊರಡಿಸಿದೆ. ಅಷ್ಟು ಮಾತ್ರವಲ್ಲದೇ, ಈ ಬರಹ ಓದುವ ಮುನ್ನವೇ ಬದಲಾದ ದರ ರಾಜ್ಯಾದ್ಯಂತ ಜಾರಿಯಾಗಿರುತ್ತದೆ. ಅಷ್ಟೊಂದು ತರಾತುರಿಯಲ್ಲಿ ಸರಕಾರ ಬಡವರಿಗೆ ಬರೆ ಎಳೆಯುವ ಕೆಲಸ ಮಾಡುತ್ತಿದೆ.

ಮೂಲಗಳ ಪ್ರಕಾರ ಕಳೆದ ಮಾರ್ಚನಲ್ಲಿಯೇ ತೈಲ ಬೆಲೆ ಏರಿಕೆಗೆ ಹಣಕಾಸು ಇಲಾಖೆ ಪ್ರಸ್ತಾವನೆ ಸಲ್ಲಿಸಿತ್ತು. ಆದರೆ ಲೋಕಸಭೆ ಚುನಾವಣೆ ಕಾರಣಕ್ಕೆ ತಾತ್ಕಾಲಿಕವಾಗಿ ಸರಕಾರ ಅದಕ್ಕೆ ಅಂಕಿತ ಹಾಕಿರಲಿಲ್ಲ. ಸದ್ಯ ಲೋಕಸಭೆ ಚುನಾವಣೆ ಮುಗಿದಿರುವುದು, ಕಾಂಗ್ರೆಸ್ಸಿಗೆ ಜನ ಮತ ಹಾಕದೇ ಇರುವುದನ್ನು ನೋಡಿ ಸರಕಾರ ತೈಲ ಬೆಲೆ ಏರಿಕೆಗೆ ಮುಂದಾಗಿದೆ.

ರಾಜ್ಯ ಸರಕಾರಕ್ಕೆ ತೈಲ ಬೆಲೆ ಏರಿಕೆ ಮಾಡುವ ಇರಾದೆ ಇದ್ದಿದ್ದರೆ ಲೋಕಸಭೆ ಚುನಾವಣೆಗೂ ಮುನ್ನವೇ ಮಾಡಬೇಕಿತ್ತು. ಚುನಾವಣೆ ಮುಗಿದ ನಂತರ ಬೆಲೆ ಏರಿಕೆ ಮಾಡಿರುವುದು ನೋಡಿದರೆ ಜನರ ಮೇಲಿನ ಸೇಡು ತೀರಿಸಿಕೊಳ್ಳುವುದಕ್ಕಾಗಿ ಇಂಥ ಕೆಲಸಕ್ಕೆ ಕೈ ಹಾಕಿದೆ ಎನ್ನಬಹುದು. ಚುನಾವಣೆಯಲ್ಲಿ ಮತ ಪಡೆಯುವುದಕ್ಕಾಗಿ ಬೆಲೆ ಏರಿಕೆ ಮಾಡದೆ ಸರಕಾರವನ್ನು ಮುನ್ನಡೆಸಿದ್ದ ಸಿದ್ದರಾಮಯ್ಯ, ಅದನ್ನು ಈಗಲೂ ಮುಂದವರಿಸದೆ ಬೆಲೆ ಏರಿಕೆಗೆ ಅಸ್ತು ಎಂದಿರುವುದು ನೋಡಿದರೆ, ಕಾಂಗ್ರೆಸ್ ಸಹ ಬಡವರ ಪರವಾಗಿಲ್ಲ ಎನ್ನುವುದು ಸ್ಪಷ್ಟವಾಗುತ್ತದೆ.

ದೇಶದಲ್ಲಿ ಪೆಟ್ರೋಲ್ ಮತ್ತು ಡೀಸೆಲ್ ಜಿಎಸ್ಟಿ ವ್ಯಾಪ್ತಿಗೆ ತರುವ ಪ್ರಯತ್ನಗಳು ನಡೆದಿರುವ ಬೆನ್ನಲ್ಲೆ ರಾಜ್ಯ ಸರಕಾರ ಮಾರಾಟ ತೆರಿಗೆಯನ್ನು ಶೇ. 25.92ರಿಂದ ಶೇ 29.84ರಷ್ಟು ಹೆಚ್ಚಳ ಮಾಡಿದೆ. ರಾಜ್ಯ ಸರಕಾರಗಳು ಜನರನ್ನು ಯಾವ ರೀತಿ ಲೂಟಿ ಮಾಡುತ್ತಿವೆ ಎನ್ನುವುದು ಇದರಿಂದ ಸ್ಪಷ್ಟವಾಗುತ್ತದೆ.

ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳ ಮೂಲಕ ಬಡವರ ಬದುಕಿನಲ್ಲಿ ದೊಡ್ಡ ಬದಲಾವಣೆ ತಂದಿದೆ ಎಂದು ಹೇಳಿಕೊಳ್ಳುತ್ತಿದೆ. ಆದರೆ ಸದ್ಯ ತೈಲ ಬೆಲೆ ಏರಿಕೆ ಮಾಡಿ, ಅದೇ ಬಡವರ ಬದುಕಿನಲ್ಲಿ ಯಾವುದೇ ಬದಲಾವಣೆ ಆಗದಂತೆ ಮೊದಲಿನ ಸ್ಥಿತಿಗೂ ಕೊಂಡೊಯ್ಯಲು ಇದೇ ಕಾಂಗ್ರೆಸ್ ಸರಕಾರವೇ ವೇದಿಕೆ ಕಲ್ಪಿಸಿದೆ. ಒಂದು ಕೈಯಿಂದ ಕೊಟ್ಟು ಮತ್ತೊಂದು ಕೈಯಿಂದ ಕಸಿದುಕೊಂಡ ಕಾಂಗ್ರೆಸ್ ನಡೆಯನ್ನು ರಾಜ್ಯದ ಜನ ಒಪ್ಪುವುದಿಲ್ಲ.



ವೀರಪ್ಪ ಪರಪ್ಪ ಸಂಕನೂರ ಇವರ ನಿಧನದ ನಿಮಿತ್ತ ಬೆಟಗೇರಿ ನಗರದ ಮಹಾರಾಣಾ ಪ್ರತಾಪ ಸಿಂಹ ಶಿಕ್ಷಣ ಸಂಸ್ಥೆಯಲ್ಲಿ ಶ್ರದ್ಧಾಂಜಲಿ ಸಭೆ ಸೇರಿ ಪ್ರಾಚಾರ್ಯರಾದ ಎ.ಎ. ಹದ್ಲಿ ಹಾಗೂ ದೈಹಿಕ ಶಿಕ್ಷಕ ಐ.ಎಸ್. ಅಂಗಡಿ ಇವರು ಮೃತರ ಗುಣಗಾನ ಮಾಡಿದರು. ಈ ಸಂದರ್ಭದಲ್ಲಿ ಸಮಸ್ತ ಸಿಬ್ಬಂದಿ ಹಾಗೂ ವಿದ್ಯಾರ್ಥಿವೃಂದದವರು ಉಪಸ್ಥಿತರಿದ್ದರು.

## ಅಪ್ಪನ ಪ್ರೀತಿ

ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ಚಿಕ್ಕಂದಿನಿಂದ ಮುದ್ದಿನಿಂದ ಬೆಳೆಸಿದ
ಬೇಸರವಿಲ್ಲದೇ ಆಟ ಆಡಿಸಿದ
ಸೈಕಲ್ ಮೇಲೆ ಊರೆಲ್ಲ ತಿರುಗಿಸಿದ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ಮಗಳ ಕಲಿಕೆಯಿಂದ ಸಂತಸಗೊಂಡ
ಗುರು ಸ್ಥಾನದಲ್ಲಿದ್ದು ಪಾಠ ಕಲಿಸಿದ
ಸ್ವಾರ್ಥವಿಲ್ಲದೇ ಸಾರ್ಥಕ ಬದುಕು ನಡೆಸಿದ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ಅಂಗಳದಲ್ಲಿಯ ರಂಗವಲ್ಲಿಯ ಕಂಡು
ಅದಕ್ಕೆ ಬಣ್ಣ ತುಂಬಲು ಹೇಳಿದ
ಒಂದೊಮ್ಮೆ ಬಿದ್ದರೂ ಎದ್ದು ನಿಲ್ಲಲು ಹೇಳಿದ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ತನ್ನ ದುಃಖವನ್ನೆಲ್ಲ ನುಂಗಿ ವಿಷಕಂಠನಾಗಿ
ಜಗದ ನಗುವಿನ ಜೊತೆಗೆ ಒಂದಾಗಿ
ಸಿಂಹದಂತೆ ಘರ್ಜಿಸಿದರೂ ಮೃದು ಸ್ವಭಾವ ಹೊಂದಿದ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ಮಗಳು ಮುಡಿದ ಮಲ್ಲಿಗೆ ಮಾಲೆಯ
ಕಂಡು ಮುಗುಳ್ನಗೆಯ ಬೀರುತ
ಅವಳ ನಗುವಿನಲ್ಲೇ ತನ್ನ ಸುಖ ಕಂಡ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ
ಅಪ್ಪನ ಅಂತಃಕರಣಕ್ಕೆ ಬರವಿಲ್ಲ
ಹೃದಯ ವೈಶಾಲ್ಯತೆಗೆ ಬಡತನವಿಲ್ಲ
ದೇಶಭಕ್ತಿಯಂಕುರಕೆ ತಂದೆಯಿಂದಲೇ ಬೆಳಕೆಲ್ಲ
ಅಪ್ಪನ ಪ್ರೀತಿಗೆ ಸರಿಸಾಟಿಯಿಲ್ಲ

– ಅಂಜನಾ ರಾಘವೇಂದ್ರ ಕುಬೇರ.

## 'ವಿಶ್ವ ಅಪ್ಪಂದಿರ ದಿನ'ದ ಪ್ರಯುಕ್ತ ವಿಶೇಷ ಬರಹ

# 'ಅಪ್ಪ'ನಿಲ್ಲದ ಜೀವನ ಶೂನ್ಯ

ಜೂನ್ 16ರಂದು ವಿಶ್ವ ಅಪ್ಪಂದಿರ ದಿನ. ಅಪ್ಪ ಐ ಲವ್ ಯೂ ಅಪ್ಪ. ಫಾದರ್ಸ್ ಡೇ ದಿನದ ಅರ್ಥ ಮತ್ತು ತಂದೆಯ ಮಹತ್ವವನ್ನು ತಿಳಿದುಕೊಳ್ಳಬೇಕು. ಅಪ್ಪ ಅಮ್ಮ ದೇವರ ಸಮಾನ. ಅಪ್ಪ ಎಂದರೆ ಬೆಳಕು. ಅಪ್ಪನಿಂದಲೇ ಈ ಬದುಕು. ಅಪ್ಪನ ಸ್ಥಾನವನ್ನು ಯಾರಿಂದಲೂ ತುಂಬಲು ಸಾಧ್ಯವಿಲ್ಲ. ತಂದೆಯ ಸ್ಥಾನ ಮತ್ತು ಅಪ್ಪ ಅಮ್ಮನ ಪ್ರೀತಿ ಅತ್ಯಮೂಲ್ಯವಾದದ್ದು.

ನಮ್ಮನ್ನು ಕಣ್ಣಲ್ಲಿ ಕಣ್ಣಿಟ್ಟು ಸಾಕುವರು ಅಪ್ಪ. ಅಂತಹ ತಂದೆ-ತಾಯಿಯನ್ನು ನಾವು ಯಾವಗಲೂ ಗೌರವದಿಂದ ಕಾಣಬೇಕು. ಅದು ನಮ್ಮ ಕರ್ತವ್ಯ ಕೂಡ. ಅಪ್ಪ ನೀ ದೇವರು ಈ ಜಗವೆಲ್ಲಾ ನೀನೇ ಅಪ್ಪ. ಅಪ್ಪ ಎಂಬ ಎರಡಕ್ಷರ ಪವಿತ್ರವಾದ ಸಂಕೇತ. ಅಪ್ಪ-ಅಮ್ಮ ದೇವರ ಸ್ವರೂಪ. ನಾವು ದೇವರನ್ನು ಎಷ್ಟು ಭಯ-ಭಕ್ತಿಯಿಂದ, ಗೌರವದಿಂದ ಪೂಜಿಸಿ ಆರಾಧಿಸುತ್ತೇವೆಯೋ ಹಾಗೇಯೇ ಅಮ್ಮ-ಅಪ್ಪನ ಭಯ ಭಕ್ತಿಯಿಂದ ಗೌರವದಿಂದ ನೋಡಿಕೊಳ್ಳಬೇಕು. ಅಪ್ಪ ಇಲ್ಲದ ಪ್ರಪಂಚವಿಲ್ಲ. ಎಲ್ಲಾ ಮಕ್ಕಳಿಗೂ ತಂದೆ ತಾಯಿಯ ಆಶೀರ್ವಾದ ಬೇಕು, ಅವರಿಂದಲೇ ನಾವು.

ತಾಯಿ ಮೊದಲ ಗುರು, ಮನೆಯೇ ಮೊದಲ ಪಾಠ ಶಾಲೆ. ತನ್ನ ಮಕ್ಕಳಿಗೆ ಮೊದಲನೆಯ ಶಿಕ್ಷಕಿ ತಾಯಿ. ಮಗು ತನ್ನ ಜೀವನದಲ್ಲಿ ಹೇಳುವ ಮೊದಲ ಪದವೂ ಅಮ್ಮ-ಅಪ್ಪ. ಎಲ್ಲಾ ಮಕ್ಕಳ ಪಾಲಿಗೆ ಅಪ್ಪನೇ ಮೊದಲ ಹೀರೋ. ಅಪ್ಪ ಮಗುವಿನ ತೋರು ಬೆರಳು ಹಿಡಿದು ತನ್ನ ಸುತ್ತ ಮುತ್ತ ಇಡೀ ಜಗತ್ತನೇ ತೋರಿಸುತ್ತಾರೆ. ಅಪ್ಪ ಅಂದರೆ ಜಗತ್ತು. ಅಪ್ಪ ಅಂದರೆ ದೇವರು. ಅಪ್ಪ ಅಂದರೆ ಶಕ್ತಿ, ಅಪ್ಪ ಅಂದರೆ ಆಕಾಶ. ಅಪ್ಪ ಅಂದರೆ ಸ್ನೇಹಿತ, ಅಪ್ಪ ಅಂದರೆ ಪಪ್ರಂಚ. ಅಪ್ಪ ಅಂದರೆ ಪ್ರೀತಿ, ಅಪ್ಪ ಅಂದರೆ ಬೆಳಕು. ಅಪ್ಪ ಅಂದರೆ ಸಂತೋಷ ಹೀಗೆ ಎಷ್ಟೆಲ್ಲ ಅರ್ಥಗಳಿವೆ ನೋಡಿ.




ಅಪ್ಪ ಮಕ್ಕಳನ್ನು ಬೈಯುವುದಕ್ಕೆ ಮುಖ್ಯ ಕಾರಣ, ಮಕ್ಕಳು ಯಾವ ತಪ್ಪೂ ಮಾಡದಿರಲಿ ಎಂದು. ನಮಗೆ ಯಾವ ಕೆಡಕು ಆಗಬಾರದು ಅಂತ ಎಷ್ಟೇ ಬೈದರೂ ಮನಸ್ಸಲಿ ಬೆಟ್ಟದಷ್ಟು ಪ್ರೀತಿ ಇರುತ್ತದೆ. ತನಗೆ ಎಷ್ಟೇ ಕಷ್ಟ, ನೋವು ಬಂದರೂ ತನ್ನ ಮಕ್ಕಳು ನಮ್ಮ ಕುಟುಂಬ ಖುಷಿಯಾಗಿ, ಸಂತೋಷವಾಗಿ ಇರಬೇಕು ಎಂದು ಬಯಸುವರು ಅಪ್ಪ. ಮಕ್ಕಳು ಕೇಳಿದ್ದನ್ನೆಲ್ಲಾ ಕೊಡಿಸಲು ಆಗದೇ ಇದ್ದರೂ ಕೈಲಾಗಿದ್ದನ್ನ ಕೊಡಿಸುವರು ಅಪ್ಪ. ಬೇಡಿದಷ್ಟು ಕೊಡದೇ ಹೋದರೂ ಸಲ್ಪವಾದರೂ ಕೊಡಿಸುವರು ಅಪ್ಪ. ತನ್ನಿಂದ ಸಾಧಿಸೋದಕ್ಕಾಗದೇ ಇರುವುದನ್ನ ತನ್ನ ಮಕ್ಕಳಿಂದ ಸಾಧಿಸಲು ಸಾಧ್ಯವಾಗುವಂತೆ ಪ್ರಯತ್ನ ಮಾಡುವರು ಅಪ್ಪ.

ಎಷ್ಟೇ ಕಷ್ಟಗಳು, ನೋವುಗಳು ಬಂದರೂ ಅದನ್ನು ತನ್ನಲ್ಲೇ ಇಟ್ಟುಕೊಂಡು ಮಕ್ಕಳನ್ನು ಪ್ರೀತಿ ಮಾಡುವರು ಅಪ್ಪ. ಅಪ್ಪ ಯಾವಗಲೂ ತನ್ನ ದುಃಖಗಳನ್ನು ಮರೆತು ಮಕ್ಕಳ ಜೀವನ ಸಂತೋಷದ ಬಗ್ಗೆ ಯೋಚಿಸುತ್ತಾರೆ.

ಮಕ್ಕಳು ಸಂತೋಷವಾಗಿರುವುದು ನೋಡಿ ಅವರೂ ಸಂತೋಷವಾಗಿರುತ್ತಾರೆ. ತಂದ-ತಾಯಿಯ ಋಣವನ್ನು ನಾವು ಎಂದಿಗೂ ತೀರಿಸಲು ಸಾಧ್ಯವಿಲ್ಲ. ಆದ್ದರಿಂದ ನಾವು ನಮ್ಮ ತಂದೆ-ತಾಯಿಗೆ ಸಾಧ್ಯವಾದಷ್ಟು ಸೇವೆ ಸಲ್ಲಿಸಬೇಕು. ನಮ್ಮ ವ್ಯಕ್ತಿತ್ವವನ್ನು ಹೆಚ್ಚಿಸಲು ಅವರು ತಮ್ಮ ಜೀವನವನ್ನು ಮುಡಿಪಾಗಿಸುತ್ತಾರೆ. ಜೀವನದ ಪ್ರತಿಯೊಂದು ಸಂತೋಷವನ್ನು ನಾವು ತಾಯಿ-ತಂದೆಗೇ ನೀಡಬೇಕು. ಅಪ್ಪ ಐ ಲವ್ ಯೂ...!



– ವಿ.ಎಂ.ಎಸ್. ಗೋಪಿ.
ಲೇಖಕರು, ಸಾಹಿತಿಗಳು, ಬೆಂಗಳೂರು.

# ಗ್ರಾಮದೇವಿಗೆ ಉಡಿ ತುಂಬಿದ ರೈತರು

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದ ಗ್ರಾಮದೇವಿ ದೇವಸ್ಥಾನ ಸೇರಿದಂತೆ ದ್ಯಾಮವ್ವ, ದುರ್ಗಮ್ಮ, ಮಾಸದೇವಿ, ರೇಣುಕಾ ಯಲ್ಲಮ್ಮ, ಬನಶಂಕರಿದೇವಿ, ದೇವಸ್ಥಾನಕ್ಕೆ ಕಂದಾಯ ಇಲಾಖೆ, ಪಟ್ಟಣ ಪಂಚಾಯತಿ, ಮುಳಗುಂದ ರೈತ ಸಂಘ ಹಾಗೂ ಹಿರಿಯರು, ಮುತ್ತೈದೆಯರು ಸೇರಿ ಶುಕ್ರವಾರ ದೇವಿಗೆ ಉಡಿತುಂಬಿ ಮಳೆ-ಬೆಳೆಗಾಗಿ ಪ್ರಾರ್ಥಿಸಿದರು.

ಪ್ರತಿ ವರ್ಷ ಮುಂಗಾರು ಪೂರ್ವದಲ್ಲಿ ಭೂಮಿಗೆ ಬೀಜ ಬಿತ್ತುವ ಮೊದಲು ಗ್ರಾಮದ ದೇವತೆಗೆ ಉಡಿತುಂಬುವುದು ಪದ್ಧತಿಯಾಗಿದೆ. ರೈತ ಸಮೂಹ ಐದು ವಾರಗಳನ್ನು ಮಾಡಿ ನಂತರ ಎಲ್ಲಾ ದೇವಸ್ಥಾನಕ್ಕೆ ತೆರಳಿ ಉಡಿ ತುಂಬಿ ಬೀಜ ಬಿತ್ತನೆ ಮಾಡುವುದರಿಂದ ಮಳೆ-ಬೆಳೆ, ಸಮೃದ್ಧಿಯಾಗುತ್ತದೆ ಎಂಬ ನಂಬಿಕೆಯಿದೆ.




ಈ ಸಂದರ್ಭದಲ್ಲಿ ಚಂದ್ರು ಬಟ್ಟೂರ, ಬಸವರಾಜ ಸುಂಕಾಪೂರ, ಚನ್ನಯ್ಯ ಹಿರೇಮಠ, ಮೋಹನ ಮದ್ದಿನ, ದೇವರಾಜ ಸಂಗನಪೇಟಿ, ದತ್ತಣ್ಣ ಎಳವತ್ತಿ, ಮುತ್ತಪ್ಪ ಬಳ್ಳಾರಿ, ಜಿ.ಎಂ. ಗಾಡಿ, ಶಂಕ್ರಯ್ಯ ಹಿರೇಮಠ, ಮಹ್ಮದಲಿ ಶೇಖ, ಬಸವರಾಜ ಕರಿಗಾರ, ದೇವಪ್ಪ ಅಣ್ಣಿಗೇರಿ ಮುಂತಾದವರಿದ್ದರು.

# ಪ್ರತಿಭಾ ಪುರಸ್ಕಾರ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಮರಾಠಾ ವಿದ್ಯಾವರ್ಧಕ ಸಂಘ ಮುಳಗುಂದ ನಾಕಾ, ಗದಗ-ಬೆಟಗೇರಿ ವತಿಯಿಂದ ಜೂನ್ 16ರ ಬೆಳಿಗ್ಗೆ 11 ಗಂಟೆಗೆ ಸಮಾಜದ ಹಾಲ್‌ನಲ್ಲಿ ಎಸ್.ಎಸ್.ಎಲ್.ಸಿ. ಹಾಗೂ ದ್ವಿತೀಯ ಪಿ.ಯು.ಸಿ. ಪರೀಕ್ಷೆ-2024ರಲ್ಲಿ ಹೆಚ್ಚು ಅಂಕ ಪಡೆದು ತೇರ್ಗಡೆಯಾದ ಮರಾಠಾ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ, 5ನೇ ತರಗತಿಯಿಂದ 10ನೇ ತರಗತಿಯ ವ್ಯಾಸಂಗ ಮಾಡುವ ವಿದ್ಯಾರ್ಥಿಗಳಿಗೆ ನೋಟಬುಕ್ ವಿತರಣೆ ನಡೆಯಲಿದೆ.

ಅರ್ಜಿ ಸಲ್ಲಿಸಿದ ಸಮಾಜದ ವಿದ್ಯಾರ್ಥಿಗಳು ಕಾರ್ಯಕ್ರಮಕ್ಕೆ ಆಗಮಿಸಿ ಪ್ರತಿಭಾ ಪುರಸ್ಕಾರ ಪಡೆಯಲು ಸಂಘದ ಅಧ್ಯಕ್ಷ ವಿನಿತಕುಮಾರ ವ್ಹಿ.ಜಗತಾಪ, ಗೌರವ ಕಾರ್ಯದರ್ಶಿ ಶಿವಾಜಿ ವಾಯ್.ಗ್ವಾರಿ ವಿನಂತಿಸಿದ್ದಾರೆ.



ಮುಳಗುಂದ ಪಟ್ಟಣದ ಅಂಜುಮನ್ ಎ ಇಸ್ಲಾಂ ಸಂಸ್ಥೆಯ ಆಡಳಿತ ಮಂಡಳಿಯ 11 ಸದಸ್ಯರ ಆಯ್ಕೆ ಚುನಾವಣೆಗೆ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ನಾಮಪತ್ರ ಸಲ್ಲಿಸುತ್ತಿದ್ದಾರೆ. ಪಟ್ಟಣದ ಚೌಡನಪೇಟಿ ಓಣಿಯ ಪಕ್ಷೇತರ ಅಭ್ಯರ್ಥಿಗಳಾದ ಜಿ.ಎಂ. ಗಾಡಿ, ಅಲ್ಲಾಭಕ್ಷಿ ಹೊಂಬಳ, ಖಲಂದರ ಗಾಡಿ, ಇಸೂಫ್ ಶಿದ್ದಿ, ಇಸ್ಮಾಯಿಲ್ ಸದರಭಾವಿ, ಇಮಾಮಹುಶೇನ ನದ್ದಿಮುಲ್ಲಾ, ಮೌಲಾಸಾಬ ಸದರಭಾವಿ ಚುನಾವಣಾಧಿಕಾರಿ ತೊಷಿಫ್ ಮಕಾಂದಾರ ಇವರಿಗೆ ಶುಕ್ರವಾರ ನಾಮಪತ್ರ ಸಲ್ಲಿಸಿದರು.

## ಯೋಗೋತ್ಸವ-24 : ಉಚಿತ ಜಿಮ್ ತರಬೇತಿ ಶಿಬಿರ ಪ್ರಾರಂಭೋತ್ಸವ

# ಮನೆಗಳು ಯೋಗ ಜಿಮ್ ಆಗಬೇಕು

■ವಿಜಯಸಾಕ್ಷಿ ಸುದ್ದಿ, ಗದಗ

ಅನೇಕ ಮಹಿಳೆಯರು ತಾವು ದೈಹಿಕವಾಗಿ ಸದೃಢರಾಗಿರಲು, ತೂಕ ಇಳಿಸಲು ಜಿಮ್ ಹಾಗೂ ಫಿಟ್‌ನೆಸ್ ಸೆಂಟರ್‌ಗಳಿಗೆ ಹೋಗುತ್ತಾರೆ. ಆದರೆ ಇದು ಎಲ್ಲ ಮಹಿಳೆರಿಗೆ ಸಾಧ್ಯವಾಗುವುದಿಲ್ಲ. ಅದಕ್ಕಾಗಿ ಮಹಿಳೆಯರು ತಮ್ಮ ಮನೆಯಲ್ಲಿರುವ ಖುರ್ಚಿ, ಸೋಫಾ, ಕಾಟಾ, ತಲೆದಿಂಬು, ಕಿಟಕಿ ಸಳಿ ಇವುಗಳ ಸಹಾಯದಿಂದ ಯೋಗ ವ್ಯಾಯಾಮ, ಯೋಗಾಸನಗಳನ್ನು ಮಾಡಲು ಸಾಧ್ಯ. ಹೀಗೆ ಮಾಡಲು ಮೊದಲು ಮಹಿಳೆಯರು ಮನಸ್ಸು ಮಾಡಬೇಕು. ಅಂಥ ಮನಸ್ಸು ಪಡೆಯಲು ಯೋಗ ಸಹಕಾರಿಯಾಗಿದೆ ಎಂದು ಅಖಿಲ ಕರ್ನಾಟಕ ಶಿವಶರಣೆ ಹೇಮರಡ್ಡಿ ಮಲ್ಲಮ್ಮ ಟ್ರಸ್ಟ್ ಗದಗ ಸಂಸ್ಥೆಯ ಅಧ್ಯಕ್ಷೆ ಪ್ರೇಮಾ ಮೇಟಿ ಅಭಿಪ್ರಾಯಪಟ್ಟರು.

ಎಸ್.ವಾಂಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಗದಗ ಇವರುಗಳ ಸಹಯೋಗದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಪ್ರಯುಕ್ತ ಯೋಗೋತ್ಸವ-24 ಕಾರ್ಯಕ್ರಮಗಳ ಅಂಗವಾಗಿ ಸಿದ್ಧಲಿಂಗ ನಗರದಲ್ಲಿನ ಬಸವ ಯೋಗ ಮಂದಿರ (ಬಸವೇಶ್ವರ ಹೈಸ್ಕೂಲ್ ಆವರಣ)ದಲ್ಲಿ ಜರುಗಿದ ಮಹಿಳೆಯರಿಗಾಗಿ ಉಚಿತ ಯೋಗ ಜಿಮ್ ತರಬೇತಿ ಶಿಬಿರ ಪ್ರಾರಂಭೋತ್ಸವ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಬಿರ ಶಿಕ್ಷಕಿ ಸುನಂದಾ ಜ್ಯಾನೋಪಂತರ ಮಾತನಾಡಿ, ಇತ್ತೀಚಿಗೆ ಮಹಿಳೆಯರಲ್ಲಿ ಮಂಡಿನೋವು, ನಡನೋವು, ತಲೆನೋವು, ಮುಟ್ಟಿನ ದೋಷಗಳು ಹೆಚ್ಚು ಕಾಡುತ್ತಲಿವೆ. ಈ ಎಲ್ಲ ನೋವು ನಿವಾರಣೆಗಾಗಿ ಆಸನ, ಪ್ರಾಣಾಯಾಮ, ಧ್ಯಾನಗಳಿವೆ. ಇವುಗಳನ್ನು ಮಾಡಲು ಸಾಧ್ಯವಾಗದವರು ಯೋಗ ಸಾಮಗ್ರಿ-ಸಲಕರಣೆಗಳ ಮೂಲಕ ಮಾಡಲು ತಿಳಿಸುವುದೇ ಯೋಗ ಜಿಮ್ ತರಬೇತಿ ಶಿಬಿರದ ಉದ್ದೇಶವಾಗಿದೆ ಎಂದರು.



ಮುಖ್ಯ ಅತಿಥಿಗಳಾಗಿ ಆಗಮಿಸಿದ ಇನ್ನರ್‌ವ್ಹೀಲ್ ಕ್ಲಬ್ ಗದಗ-ಬೆಟಗೇರಿ ಅಧ್ಯಕ್ಷೆ ರಜನಿ ಪಾಟೀಲ ಮಾತನಾಡಿ, ಮಹಿಳೆಯರು ದಿನನಿತ್ಯ ತಮ್ಮ ಮನೆಯಲ್ಲಿ ಮಾಡುವ ಕೆಲಸ ಕಾರ್ಯಗಳಲ್ಲಿಯೇ ಯೋಗ ಕ್ರಿಯೆಗಳು ಒಳಗೊಂಡಿವೆ. ಇವೆಲ್ಲವೂ ಆರೋಗ್ಯ ಗುಣಾಂಶಗಳನ್ನು ಹೊಂದಿವೆ. ಆದ್ದರಿಂದ ಮಹಿಳೆಯರು ಸೋಮಾರಿತನ ತೊರೆದು ತಮ್ಮ ತಮ್ಮ ಮನೆಗೆಲಸಗಳನ್ನು ತಾವೇ ನಿಭಾಯಿಸಿದರೆ ಆರೋಗ್ಯವಂತರಾಗುವಿರಿ ಎಂದರು.

ಗೌರಿ ಜಿರಂಕಳಿ ಮತ್ತು ಸಂಗಡಿಗರು ಪ್ರಾರ್ಥನೆ ಹೇಳಿದರು. ಶಾಂತಾ ಮುಂದಿನಮನಿ ಪರಿಚಯಿಸಿ ಸ್ವಾಗತ ಕೋರಿದರು. ಶಿಬಿರದ ಮಾರ್ಗದರ್ಶಕ ಕೆ.ಎಸ್. ಪಲ್ಲೇದ ಪ್ರಾಸ್ತಾವಿಕ ನುಡಿ ತಿಳಿಸಿದರು. ವಿಜಯಾ ಚನ್ನಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು. ಅರುಣಾ ಇಂಗಳಳ್ಳಿ ವಂದಿಸಿದರು.

# ಕಣ್ಣಿನ ಉಚಿತ ತಪಾಸಣಾ ಶಿಬಿರ

■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಹಿಂದುಳಿದ ವರ್ಗ ಹಾಗೂ ವದೇಶ ಕಾಯುವ ಸೈನಿಕರನ್ನು ಗೌರವಿಸಿ

ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಮ್ಮ ಜೀವನದ ಹಂಗು ತೊರೆದು ದೇಶದ ರಕ್ಷಣೆ ಮಾಡುವ ಸೈನಿಕರನ್ನು ಗೌರವದಿಂದ ಕಾಣಬೇಕು ಎಂದು ಎಸ್‌ಡಿಎಂಸಿ ಸದಸ್ಯ ಜಿ.ಎಂ. ಗಾಡಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕಿ ಎಸ್.ಡಿ. ಪಂಡಿತ ಅವರ ಮಗ ಹರೀಶ ನರೆಗಲ್ಲ ಅವರನ್ನು ಗೌರವಿಸಿ ಮಾತನಾಡಿ, ಹರೀಶ ಅತೀ ಚಿಕ್ಕ ವಯಸ್ಸಿನಲ್ಲಿ ಸೈನ್ಯಕ್ಕೆ ಸೇರಿದ್ದು ನಮಗೆಲ್ಲರಿಗೂ ಹೆಮ್ಮೆಯ ಸಂಗತಿ. ಇಂತಹ ಸೈನಿಕರನ್ನು ನಾವು ಸದಾ ಗೌರವಿಸಬೇಕು ಎಂದರು.




ಶಿಕ್ಷಕಿ ವಿ.ಎಂ. ಕಂಠಿ ಮಾತನಾಡಿದರು. ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಎಂ.ಎಂ. ಮೆಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್, ಎಚ್.ಆರ್. ಭಜೆಂತ್ರಿ, ಎಸ್.ಎಚ್. ಉಪ್ಪಾರ, ಟಿ.ವೀಣಾ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ನಂದಾ ಮಟ್ಟಿ, ಜ್ಯೋತಿ ಜಾಧಾವ, ಪವಿತ್ರಾ ಮಟ್ಟಿ, ಶಭಾನಾ ಡಾಲಾಯತ ಇದ್ದರು.

# ಅರಣ್ಯೀಕರಣ ನಮ್ಮೆಲ್ಲರ ಆದ್ಯತೆಯಾಗಲಿ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮುಂದಿನ ಪೀಳಿಗೆಗೆ ಉತ್ತಮ ಆಮ್ಲಜನಕ ಜತೆಗೆ ಪರಿಸರ ಉಳಿಸಲು ಸಸಿಗಳನ್ನು ನೆಟ್ಟು ಅರಣ್ಯೀಕರಣ ನಿರ್ಮಾಣಕ್ಕೆ ಮುಂದಾಗುವುದು ನಮ್ಮ ಕರ್ತವ್ಯವಾಗಿದೆ ಎಂದು ಮಾಜಿ ಸಚಿವ ಕಳಕಪ್ಪ ಬಂಡಿ ಹೇಳಿದರು.

ಸ್ಥಳೀಯ ರೋಣ ರಸ್ತೆಯ ನಿವಾಸದಲ್ಲಿ ಶುಕ್ರವಾರ ನಡೆದ ವನಮಹೋತ್ಸವ ಕಾರ್ಯಕ್ರಮದಲ್ಲಿ ಪುರಸಭೆ ಸದಸ್ಯರು ಹಾಗೂ ಪಕ್ಷದ ಕಾರ್ಯಕರ್ತರಿಗೆ ಉದ್ದೇಶಿಸಿ ಅವರು ಮಾತನಾಡಿದರು.

ಕಾಡು ಉಳಿದರೆ, ನಾಡು ಉಳಿದಂತೆ. ಪ್ರತಿಯೊಬ್ಬರಿಗೆ ಶಿಕ್ಷಣ, ಆರೋಗ್ಯ ಹಾಗೂ ಅಂತಸ್ತು ಜೀವನದಲ್ಲಿ ಬದುಕು ನಡೆಸಲು ಎಷ್ಟು ಮುಖ್ಯವೋ ಅದಕಿಂತಲೂ ಮುಖ್ಯವಾದದ್ದು ಎಂದರೆ ಉತ್ತಮ ಪರಿಸರ ಕಾಪಾಡಿಕೊಳ್ಳುವುದು. ಕೃತಕ ಆಮ್ಲಜನಕ ಉತ್ಪಾದನೆ ಸಾಧ್ಯವಿಲ್ಲ. ಹೀಗಾಗಿ ಪ್ರಕೃತಿ ದತ್ತವಾಗಿ ನಮಗೆ ವರದಂತೆ ಸಿಗುವ ಆಮ್ಲಜನಕವನ್ನು ಪಡೆಯಲು ನಾವು ಇಂದು ಸಸಿಗಳನ್ನು ನೆಡುವುದರ ಜತೆಗೆ ಗಿಡಗಳನ್ನು ರಕ್ಷಿಸುವ ಮೂಲಕ ಪರಿಸರದಲ್ಲಿ ಸಮತೋಲವನ್ನು ಕಾಡಿಕೊಳ್ಳಲು ಮುಂದಾಗಬೇಕು ಎಂದರು.

ಬಿಜೆಪಿ ನಗರ ಘಟಕದ ಅಧ್ಯಕ್ಷ ರಾಜೇಂದ್ರ ಘೋರ್ಪಡೆ ಮಾತನಾಡಿದರು.

ಪುರಸಭೆ ಹಂಗಾಮಿ ಅಧ್ಯಕ್ಷ ವೀರಪ್ಪ ಪಟ್ಟಣಶೆಟ್ಟಿ, ಪುರಸಭೆ ಸದಸ್ಯರಾದ ರೂಪೇಶ ರಾಠೋಡ, ಮುದಿಯಪ್ಪ ಮುಧೋಳ, ಯಮನೂರ ತಿರಕೋಜಿ ಹಾಗೂ ಸಿದ್ದಣ್ಣ ಬಳಿಗೇರ, ಅಶೋಕ ವನ್ನಾಲ, ದುರಗಪ್ಪ ಮುಧೋಳ, ಬುಡ್ಡಪ್ಪ ಮೂಲಿಮನಿ ಸೇರಿ ಇತರರು ಇದ್ದರು.

### ಜಿ.ಪಂ ಸಭಾಂಗಣದಲ್ಲಿ ಉಪಲೋಕಾಯುಕ್ತರಿಂದ ಬಾಕಿ ಪ್ರಕರಣಗಳ ವಿಚಾರಣೆ

# ಹಲವು ಪ್ರಕರಣಗಳಿಗೆ ಸ್ಥಳದಲ್ಲಿಯೇ ನಿರ್ಣಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಶನಿವಾರ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಸಾರ್ವಜನಿಕ ಅಹವಾಲು, ಕುಂದುಕೊರತೆ ಮರು ವಿಚಾರಣೆ ಹಾಗೂ ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಾದ ಪ್ರಕರಣಗಳ ಕುರಿತು ವಿಚಾರಣೆ ನಡೆಸಿದರು.




ಉಪಲೋಕಾಯುಕ್ತರಾದ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಸಾರ್ವಜನಿಕರ ಬಾಕಿ ಪ್ರಕರಣಗಳ ವಿಲೇವಾರಿ ಮತ್ತು ವಿಚಾರಣೆ ನಡೆಸಿದರು. ಮುಳಗುಂದದ ವಿರುಪಾಕ್ಷಪ್ಪ ಅಕ್ಕಿ ಅವರು ತಮ್ಮ ಮನೆಯ ಹಿಂದೆ ಇರುವ ಸರ್ಕಾರಿ ರಸ್ತೆ ಒತ್ತುವರಿ ಕುರಿತು ದೂರು ಸಲ್ಲಿಸಿದ್ದು, ವಿಚಾರಣೆ ಕೈಗೆತ್ತಿಕೊಂಡ ಲೋಕಾಯುಕ್ತರು ಅಧಿಕಾರಿಗಳಿಂದ ಪ್ರಕರಣ ಕುರಿತು ವಿವರಣೆ ಪಡೆದರು. ಅಧಿಕಾರಿಗಳು ರಸ್ತೆಯ ಒತ್ತುವರಿ ತೆರವುಗೊಳಿಸಿದ್ದರ ಕುರಿತು ತಿಳಿಸಿದ್ದು, ಪ್ರಕರಣ ಮುಕ್ತಾಯಗೊಳಿಸಲಾಯಿತು.

ಗದಗನ ಹನುಮಂತಪ್ಪ ಚಲವಾದಿ ಅವರು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರ ಕಾರ್ಯಾಲಯಕ್ಕೆ ನಗರಸಭೆಯ ವ್ಯಾಪ್ತಿಯ ಸರ್ವೇ ಉತಾರದ ಕುರಿತು ಮಾಹಿತಿ ಹಕ್ಕು ಅಧಿನಿಯಮದಡಿ ಮಾಹಿತಿ ಕೋರಿದ್ದು, ಅವರು ನೀಡಿದ ಮಾಹಿತಿ ಸುಳ್ಳು ಎಂದು ಆರೋಪಿಸಿ ಪ್ರಕರಣ ದಾಖಲಾಗಿಸಲಾಗಿದೆ. ಈ ಕುರಿತು ಅರ್ಜಿದಾರರು ಮಾಹಿತಿ ಹಕ್ಕಿನಡಿ

> ಸದರಿ ಪ್ರಕರಣಗಳ ವಿಚಾರಣೆ ಸಂದರ್ಭದಲ್ಲಿ ನಿವೇಶನ ಹಂಚಿಕೆ, ನಿವೃತ್ತಿ ನಂತರ ಪಿಂಚಣಿ ನಿಗದಿ, ಶಾಲಾ ಆಟದ ಮೈದಾನದ ಒತ್ತುವರಿ, ಬೆಳೆ ಪರಿಹಾರ, ಕೆರೆ ಒತ್ತುವರಿ, ವೇತನ ಸ್ಥಗಿತ ಹೀಗೆ ಹಲವು ರೀತಿಯ ಪ್ರಕರಣಗಳ ವಿಚಾರಣೆ ನಡೆಸಿ, ಹಲವು ಪ್ರಕರಣಗಳಿಗೆ ಸ್ಥಳದಲ್ಲಿಯೇ ನಿರ್ಣಯ ನೀಡಲಾಯಿತು.

ಸಂಬಂಧಿಸಿದವರಿಗೆ ಮೇಲ್ಮನವಿ ಸಲ್ಲಿಸುವುದರ ಮೂಲಕ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದು ತಿಳಿಸಿ ಅವರ ಪ್ರಕರಣ ವಜಾಗೊಳಿಸಲಾಯಿತು.

ಶಾಂತಗಿರಿಯ ಮಲ್ಲೇಶಪ್ಪ ಅವರು ಜೀವಂತವಿದ್ದರೂ ಸಹಿತ ಗ್ರಾಮ ಲೆಕ್ಕಾಧಿಕಾರಿಗಳು ಸುಳ್ಳು ಮರಣ ಪ್ರಮಾಣಪತ್ರ ನೀಡಿರುತ್ತಾರೆಂದು ದೂರು ನೀಡಿದ್ದು, ಜನತಾ ದರ್ಶನ ಪ್ರಾರಂಭವಾದ ಮೇಲೆ ಅವರ ಪಿಂಚಣಿ ಮಂಜೂರಾತಿ ಮಾಡಲಾಗಿದೆ. ಈ ಕುರಿತು ಸೂಕ್ತ ಸಾಕ್ಷ್ಯಾಧಾರಗಳನ್ನು ಅವರು ಒದಗಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಸಂಪನ್ಮೂಲ ಅಧಿಕಾರಿ ಪ್ರಕಾಶ ನಾಡಗೇರ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಜಿ.ಎಸ್. ಪಲ್ಲೇದ, ಲೋಕಾಯುಕ್ತ ಪೊಲೀಸ್ ಅಧೀಕ್ಷಕರಾದ ಸತೀಶ ಚಿಟಗುಬ್ಬಿ, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಕಾನೂನು

# ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡಿ



■ವಿಜಯಸಾಕ್ಷಿ ಸುದ್ದಿ, ಗದಗ

ಕಾನೂನು ವಿದ್ಯಾರ್ಥಿಗಳು ಹೊಸ ಹೊಸ ಕಾಯ್ದೆಗಳನ್ನು ನಿರಂತವಾಗಿ, ಕಠಿಣ ಪರಿಶ್ರಮದೊಂದಿಗೆ ಅಧ್ಯಯನ ಮಾಡಲು ಮುಂದಾಗಬೇಕು. ಪ್ರಸುತ್ತ ಸಮಾಜದಲ್ಲಿ ವಕೀಲರ ಪಾತ್ರ ಮುಖ್ಯವಾಗಿದೆ ಎಂದು ಕರ್ನಾಟಕ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಹೇಳಿದರು. ಶಹರದ ಕೆ.ಎಲ್.ಇ ಸಂಸ್ಥೆಯ ಎಸ್.ಎ. ಮಾನ್ವಿ ಕಾನೂನು ಮಹಾವಿದ್ಯಾಲಯದಲ್ಲಿ ಶನಿವಾರ ಕರ್ನಾಟಕ ಲೋಕಾಯುಕ್ತರಿಂದ ಕಾನೂನು ವಿದ್ಯಾರ್ಥಿಗಳಿಗೆ ಕಾನೂನು ಮತ್ತು ಲೋಕಾಯುಕ್ತ ಕಾಯ್ದೆ ಕುರಿತು ಉಪನ್ಯಾಸ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ನಿರಂತರ ಅಧ್ಯಯನ, ಜ್ಞಾನ ಸಂಪಾದನೆಯೇ ವಕೀಲ ವೃತ್ತಿಯ ಬಂಡವಾಳ. ಇಂಗ್ಲಿಷ್ ಭಾಷೆಯ ಪ್ರೌಢಿಮೆ ಹಾಗೂ ಆಧುನಿಕ ತಂತ್ರಜ್ಞಾನ ಬಳಕೆಯ ತಿಳಿವಳಿಕೆ ಇದ್ದಲ್ಲಿ ವಕೀಲಿ ವೃತ್ತಿಯಲ್ಲಿ ಯಶಸ್ಸನ್ನು ಸಾಧಿಸಲು ದೊಡ್ಡ ಮಟ್ಟದಲ್ಲಿ ಸಹಕಾರ ನೀಡುತ್ತದೆ. ವಕೀಲ ವೃತ್ತಿ ನೋಬಲ್ ವೃತ್ತಿಯಾಗಿದೆ. ಪ್ರತಿಯೊಂದು ಕ್ಷೇತ್ರದಲ್ಲಿ ಕೆಲಸ ಮಾಡುತ್ತಿರುವವರು ವಕೀಲರ ಬಳಿ ಬರುತ್ತಾರೆ. ಹೀಗಾಗಿ 'ಆಡು ಮುಟ್ಟದ ಸೊಪ್ಪಿಲ್ಲ' ಎನ್ನುವಂತೆ ವಕೀಲರು ಎಲ್ಲಾ ವಿಷಯದ ಬಗ್ಗೆಯೂ ತಿಳಿದುಕೊಂಡಿರಬೇಕು ಎಂದರು.

ಕಾನೂನು ವಿದ್ಯಾರ್ಥಿಗಳು ಕೂಡ ಲೋಕಾಯುಕ್ತ ಕಾಯ್ದೆಯ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಕಾರ್ಯವನ್ನು ಮಾಡಬೇಕಿದೆ. ಏಕೆಂದರೆ ಇಂದಿನ ದಿನಗಳಲ್ಲಿ ಕಾನೂನು ಅರಿವು ಇಲ್ಲದಿರುವ ಸಾರ್ವನಿಕರಿಗೆ ಸಾರ್ವಜನಿಕ ಅಧಿಕಾರಿಗಳು ಯಾವುದಾದರೂ ಕೆಲಸ-ಕಾರ್ಯಗಳಿಗೆ ವಿಳಂಬ ಮಾಡಿದರೆ, ಕೆಲಸಕ್ಕೆ ಹಣದ ಬೇಡಿಕೆಯಿಟ್ಟಲ್ಲಿ ನೇರವಾಗಿ ಲೋಕಾಯುಕ್ತರನ್ನು ಸಂಪರ್ಕ ಮಾಡಲು ಅವಕಾಶವಿದೆ. ಆದ್ದರಿಂದ ಕಾನೂನು ವಿದ್ಯಾರ್ಥಿಗಳಿಗೆ ಸಮಾಜ ಮತ್ತು ವೃತ್ತಿ ನಾಣ್ಯದ ಒಂದೇ ಮುಖವಾಗಿದೆ ಎಂದರು.

ಪ್ರಾಚಾರ್ಯ ಜೈಹನುಮಾನ ಎಚ್.ಕೆ ಮಾತನಾಡಿದರು. ಉಪನ್ಯಾಸಕರಾದ ಡಾ. ವಿಜಯ ಮುರದಂಡೆ, ಎಸ್.ಟಿ. ಮೂರಶಿಳ್ಳಿನ, ಡಾ. ಜ್ಯೋತಿ ಸಿ.ವಿ, ಡಾ. ಸಿ.ಬಿ. ರಣಗಟ್ಟಿಮಠ, ಡಾ. ಶ್ರೀನಿವಾಸ ಪಾಲ್ಕೊಂಡ, ಶರತ್ ದರಬಾರೆ, ಸಿ. ರಾಚಣ್ಣವರ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳು ಇದ್ದರು.

# ಆರೋಗ್ಯದತ್ತ ಹೆಚ್ಚು ಗಮನ ಕೊಡಿ




■ವಿಜಯಸಾಕ್ಷಿ ಸುದ್ದಿ, ಡಂಬಳ

ವೆಂಕಟಾಪೂರ ಗ್ರಾಮದ ಯುವಕರು ವಿಶ್ವ ರಕ್ತದಾನಿಗಳ ದಿನದಂದು ರಕ್ತದಾನವನ್ನು ಮಾಡುವುದರ ಮೂಲಕ ಹಲವಾರು ಜೀವಗಳನ್ನು ಉಳಿಸಲು ಸಹಕಾರಿಯಾಗುತ್ತಿರುವುದು ಪ್ರಶಂಸನೀಯ ಎಂದು ಸಂಕಲ್ಪ ರೂರಲ್ ಡೆವಲಪ್‌ಮೆಂಟ್ ಸಂಸ್ಥೆಯ ಸಿಇಒ ಸಿಕಂದರ ಮೀರಾನಾಯಕ ಹೇಳಿದರು. ಡಂಬಳ ಹೋಬಳಿಯ ವೆಂಕಟಾಪೂರ ಗ್ರಾಮದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಅನ್ನದಾನೀಶ್ವರ ಮಠದ ಆವರಣದಲ್ಲಿ ಎಸ್‌ಬಿಐ ಫೌಂಡೇಶನ್ ಮತ್ತು ಸಂಕಲ್ಪ ರೂರಲ್ ಡೆವಲಪ್‌ಮೆಂಟ್ ಸೊಸೈಟಿಯ ಸಂಯೋಗದಲ್ಲಿ ಹಮ್ಮಿಕೊಂಡ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವ ಆರೋಗ್ಯದಿಂದ ಇದ್ದಾಗ ಮಾತ್ರ ಏನಾದರೂ ಸಾಧಿಸಬಲ್ಲ. ಆದರೆ ಇಂದಿನ ಬದುಕಿನಲ್ಲಿ ಆರೋಗ್ಯದತ್ತ ಗಮನಕೊಡುವದನ್ನೇ ಮರೆಯುತ್ತಿದ್ದಾನೆ. ಇದರ ಪರಿಣಾಮವಾಗಿ ಹಲವಾರು ಕಾಯಿಲೆಗಳು ಕಾಡತೊಡಗಿವೆ. ಇದರಿಂದ ಹೊರಬರಬೇಕಾದರೆ ಆರೋಗ್ಯದತ್ತ ಹೆಚ್ಚು ಗಮನ ಕೊಡಬೇಕಾಗಿದೆ ಎಂದರು. ವೈದ್ಯರಾದ ಡಾ.ದತ್ತಾತ್ರೇಯ ವೈಕುಂಠ ಮಾತನಾಡಿ, ಭಾರತದಲ್ಲಿ ಪ್ರತಿ 2 ಸೆಂಕೆಡಿಗೆ ಒಬ್ಬರಿಗೆ ರಕ್ತದ ಅಗತ್ಯ ಉಂಟಾಗುತ್ತದೆ. ಪ್ರತಿ ವರ್ಷ ಸರಾಸರಿ 5 ಕೋಟಿ ಯುನಿಟ್‌ಗೂ ಹೆಚ್ಚು ರಕ್ತ ಬೇಕಾಗುತ್ತದೆ. ಆದರೆ ಸಂಗ್ರಹವಾಗುವುದು 2.5ಕೋಟಿ ಯುನಿಟ್ ಮಾತ್ರ. ಹೀಗಾಗಿ, ಯುವಕರು ರಕ್ತದಾನ ಮಾಡಲು ಮುಂದಾಗಬೇಕಾಗಿದೆ ಎಂದು ಹೇಳಿದರು.

ವೆಂಕಟಾಪೂರ ಗ್ರಾಮದ 25ಕ್ಕೂ ಹೆಚ್ಚು ಯುವಕರು ರಕ್ತದಾನ ಮಾಡುವುದರ ಮೂಲಕ ವಿಶ್ವ ರಕ್ತದಾನಿಗಳ ದಿನವನ್ನು ಅರ್ಥಪೂರ್ಣವಾಗಿ ಆಚರಿಸಿದರು. ಕಾರ್ಯಕ್ರಮದಲ್ಲಿ ಬಸವರಾಜ ಹಳ್ಳಿ, ಹಣಮಂತಪ್ಪ ಮರಿಗೌಡ್ರ, ಕುಬೇರಪ್ಪ ಬಿಸನಳ್ಳಿ, ಬಸವರಾಜ ತುಪ್ಪದ, ಭೀಮಪ್ಪ ಸಂಶಿ, ಬಸವರಾಜ ಎಸ್, ಮಂಜುನಾಥ ಕೆ, ವಿರುಪಾಕ್ಷಪ್ಪ, ಕಲ್ಲಪ್ಪ ಎಸ್.ಕೆ, ಹುಸೇನಸಾಬ ಎನ್, ಗೋಣೆಪ್ಪ ಟಿ, ಸಂಗಪ್ಪ ಎ, ಮುತ್ತಪ್ಪ ಬಿ, ಶಿವಕುಮಾರ, ಪಾರಪ್ಪಾ ಕೆ, ವಿರುಪಾಕ್ಷಗೌಡ, ಸರಣಪ್ಪ, ಕುಬೇರಪ್ಪ, ಶಿಕಂದರ, ಮುತ್ತಪ್ಪ ಆರ್, ಮಂಜುನಾಥ, ಶಿವಾನಂದ, ಸಿದ್ಧಪ್ಪ, ಶರಣಪ್ಪ, ವಿ.ಎಸ್. ಅರಕಸಾಲಿ, ಬಸವರಾಜ, ಮಂಜಪ್ಪ ಮುಂತಾದವರಿದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಶ್ರೀಗಳು

# ಯುವಕರಿಂದ ದೇಶದ ಅಭಿವೃದ್ಧಿ ಸಾಧ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಯುವಕರು ದೇಶದ ಅಭಿವೃದ್ಧಿಯ ಕಡೆಗೆ ವಿಶೇಷ ಗಮನಹರಿಸಬೇಕು. ಯುವಕರಿಂದ ದೇಶದ ಅಭಿವೃದ್ಧಿ ಸಾಧ್ಯ ಎಂದು ಡಾ. ತೋಂಟದ ಸಿದ್ಧರಾಮ ಶ್ರೀಗಳು ಮಾತನಾಡಿದರು.




ಲಿಂಗಾಯತ ಪ್ರಗತಿಶೀಲ ಸಂಘದ 2697ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಐ.ಟಿ.ಐ. ತರಬೇತಿ ಕೇಂದ್ರಗಳು ಗ್ರಾಮೀಣ ಭಾಗದ ಬಡ ವಿದ್ಯಾರ್ಥಿಗಳಿಗೆ ಉಪಯುಕ್ತವಾಗಿವೆ. ನಮ್ಮ ಗುರುಗಳಾದ ಡಾ. ತೋಂಟದ ಸಿದ್ಧಲಿಂಗ ಮಹಾಸ್ವಾಮಿಗಳು ಗ್ರಾಮೀಣ ಭಾಗದಲ್ಲಿ ಹೆಚ್ಚು ಐ.ಟಿ.ಐ. ತರಬೇತಿ ಕೇಂದ್ರಗಳನ್ನು ಸ್ಥಾಪಿಸಿದ್ದಾರೆ.

ಬಹಳಷ್ಟು ವಿದ್ಯಾರ್ಥಿಗಳು ಕೈಗಾರಿಕೆಗಳಲ್ಲಿ, ಸರಕಾರಿ ಇಲಾಖೆಗಳಲ್ಲಿ ಉದ್ಯೋಗ ಪಡೆದು ಜೀವನ ರೂಪಿಸಿಕೊಳ್ಳುತ್ತಿದ್ದಾರೆ. ಯುವಕರು ಮಾನವೀಯ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಯುವಕರು ಪರಿಶ್ರಮಿಗಳಾಗಬೇಕು ಎಂದು ಅಭಿಪ್ರಾಯಪಟ್ಟರು.

ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಅರಳಿ ನಾಗರಾಜ ಮಾತನಾಡಿ, ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳಲ್ಲಿ ಕೀಳರಿಮೆ ಇರಬಾರದು. ಕಲಿತವರೆಲ್ಲರೂ ನೌಕರಿಯ ಮೇಲೆ ಹೆಚ್ಚು ಅವಲಂಬನೆ ಆಗಬಾರದು. ಪ್ರತಿಯೊಬ್ಬ ವ್ಯಕ್ತಿಯಲ್ಲಿಯೂ ಸಾಮರ್ಥ್ಯ ಇರುತ್ತದೆ. ಆ ಸಾಮರ್ಥ್ಯ ಅರಿತು ಬೆಳೆಯಬೇಕು ಎಂದರು.

ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಜಂಟಿ ನಿರ್ದೇಶಕ ಬಸವಪ್ರಭು ಹಿರೇಮಠ ಮಾತನಾಡಿದರು. ಮಾಜಿ ಸಚಿವ ಎಸ್.ಎಸ್. ಪಾಟೀಲ ಉಪಸ್ಥಿತರಿದ್ದರು. ವಿಶ್ರಾಂತ ನ್ಯಾಯಮೂರ್ತಿ ಅರಳಿ ನಾಗರಾಜ ರಚಿಸಿದ 'ದೇಶದ ಚಿತ್ತ ಯುವಜನರತ್ತ' ಕೃತಿಯನ್ನು ಲೋಕಾರ್ಪಣೆಗೊಳಿಸಲಾಯಿತು. ಪ್ರತಿಭಾವಂತ ಐ.ಟಿ.ಐ. ವಿದ್ಯಾರ್ಥಿಗಳಿಗೆ ಉಚಿತ ಟೂಲ್‌ಕಿಟ್ ವಿತರಣೆ ಮಾಡಲಾಯಿತು.

ಮೃತ್ಯುಂಜಯ ಹಿರೇಮಠ ಮತ್ತು ಗುರುನಾಥ ಸುತಾರ ತಂಡದವರು ವಚನ ಸಂಗೀತ ಹಾಡಿದರು. ಧರ್ಮಗ್ರಂಥ ಪಠಣವನ್ನು ಸಾಕ್ಷಿ ರವಿ ದೇವರಡ್ಡಿ, ವಚನ ಚಿಂತನೆಯನ್ನು ರೇಖಾ ರವಿ ದೇವರಡ್ಡಿ ಮಾಡಿದರು.

> 'ಐ.ಟಿ.ಐ. ತರಬೇತಿ ಮತ್ತು ಅದರ ಮಹತ್ವ' ಕುರಿತು ಬೋಜರಾಜ ಸೊಪ್ಪಿಮಠ ಉಪನ್ಯಾಸ ನೀಡಿ, ಓದಲಿಕ್ಕೆ, ಬರೆಯಲಿಕ್ಕೆ, ಒಳ್ಳೆಯದು ಕೆಟ್ಟದ್ದನ್ನು ಅರಿಯಲು, ಜೀವನವನ್ನು ರೂಪಿಸಿಕೊಳ್ಳಲಿಕ್ಕೆ, ಸೈದ್ಧಾಂತಿಕ ವಿಷಯಗಳಲ್ಲಿ ನಡೆಯಲು ಶಿಕ್ಷಣ ಬಹಳ ಅವಶ್ಯ. 10ನೇ ತರಗತಿಯಲ್ಲಿ ಕಡಿಮೆ ಅಂಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಅಲ್ಪಾವಧಿಯಲ್ಲಿ ನಮ್ಮ ಕೈಗಾರಿಕಾ ತರಬೇತಿ ಕೇಂದ್ರಗಳು ಭವಿಷ್ಯವನ್ನು ನೀಡುತ್ತಿವೆ ಎಂದರು.

ಶಿವಾನುಭವದ ದಾಸೋಹ ಭಕ್ತಿಸೇವೆಯನ್ನು ವಹಿಸಿಕೊಂಡಿದ್ದ ಶರಣ ಸಾಹಿತಿ ಎಸ್.ಆರ್. ನರೇಗಲ್ ಹಾಗೂ ನಿವೃತ್ತ ಶಿಕ್ಷಕರು ಮತ್ತು ಜೆ.ಟಿ.ವಿ.ಪಿ. ಐ.ಟಿ.ಐ. ಸಿಬ್ಬಂದಿ ವರ್ಗ ಅವರನ್ನು ಪೂಜ್ಯರು ಸಂಮಾನಿಸಿದರು.

ಸರ್ವರನ್ನು ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಶೇಖಣ್ಣ ಕಳಸಾಪೂರ ಸ್ವಾಗತಿಸಿದರು. ರತ್ನಕ್ಕ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಉಪಾಧ್ಯಕ್ಷ ಬಾಲಚಂದ್ರ ಭರಮಗೌಡರ, ರೇಣುಕಾ ವಿ.ಕರೇಗೌಡ್ರ, ಕಾರ್ಯದರ್ಶಿ ಮಹೇಶ ಗಾಣಿಗೇರ, ಸಹಕಾರ್ಯದರ್ಶಿ ವಿಜಯಕುಮಾರ ಹಿರೇಮಠ, ವಿರುಪಾಕ್ಷಪ್ಪ ಅರಳಿ, ಸಂಘಟನಾ ಕಾರ್ಯದರ್ಶಿ ಅಶೋಕ ಹಾದಿ, ಕೋಶಾಧ್ಯಕ್ಷ ಸುರೇಶ ನಿಲೂಗಲ್, ಶಿವಾನುಭವ ಸಮಿತಿ ಚೇರಮನ್ ವಿವೇಕಾನಂದಗೌಡ ಪಾಟೀಲ ಉಪಸ್ಥಿತರಿದ್ದರು.

### ಹಿರಿಯ ಪತ್ರಕರ್ತ ಮತ್ತಿಹಳ್ಳಿ ಮದನಮೋಹನ ನಿಧನಕ್ಕೆ ಸಂತಾಪ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹಿರಿಯ ಪತ್ರಕರ್ತ ಮತ್ತಿಹಳ್ಳಿ ಮದನಮೋಹನ ಅವರು ಶನಿವಾರ ಹುಬ್ಬಳ್ಳಿ ಖಾಸಗಿ ಆಸ್ಪತ್ರೆಯಲ್ಲಿ ನಿಧನರಾದ ಪ್ರಯುಕ್ತ ಕರ್ನಾಟಕ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಸಂತಾಪ ಸಭೆ ನಡೆಯಿತು.

ವಿಭಾಗದ ಮುಖ್ಯಸ್ಥ ಪ್ರೊ. ಜೆ.ಎಂ. ಚಂದುನವರ ಮಾತನಾಡಿ, ಪತ್ರಕರ್ತ ಮತ್ತಿಹಳ್ಳಿ ಮದನಮೋಹನ ಅವರು ಉತ್ತರ ಕರ್ನಾಟಕ ಮಾತ್ರವಲ್ಲದೆ ಗೋವಾ ವ್ಯಾಪ್ತಿಯ ಎಲ್ಲ ಸುದ್ದಿಗಳನ್ನು ದಿ ಹಿಂದು ಪತ್ರಿಕೆಗೆ ವರದಿ ಮಾಡಿದ ಶ್ರೇಷ್ಠತೆ ಹೊಂದಿದ್ದರು. ಪ್ರಾಮಾಣಿಕ ಪತ್ರಕರ್ತ ಮಾತ್ರವಲ್ಲದೆ ಕವಿವಿ ಪತ್ರಿಕೋದ್ಯಮ ವಿಭಾಗದ ಜೊತೆಗೆ ಒಡನಾಟ ಹೊಂದಿ ಹಲವಾರು ಜನ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದ್ದನ್ನು ಸ್ಮರಿಸಿದರು.

ವಿಭಾಗದ ಪ್ರಾಧ್ಯಾಪಕ ಡಾ.ಸಂಜಯ ಕುಮಾರ ಮಾಲಗತ್ತಿ, ಮದನಮೋಹನರು ಯುವ ಪತ್ರಕರ್ತರಿಗೆ ಮಾರ್ಗದರ್ಶನ ಮಾಡಿದ್ದನ್ನು ಸ್ಮರಿಸಿದರು. ಮೃತರ ಗೌರವಾರ್ಥ ಮೌನ ಆಚರಿಸಲಾಯಿತು. ಅತಿಥಿ ಉಪನ್ಯಾಸಕ ಡಾ.ನಾಗರಾಜ ರೋಣದ ಹಾಗೂ ಸಂಶೋಧನಾ ವಿದ್ಯಾರ್ಥಿಗಳು ಉಪಸ್ಥಿರರಿದ್ದರು.

## ನಿಧನ ವಾರ್ತೆ



### ಚಿನ್ನಪ್ಪ ಮುಸ್ಕಿನಭಾವಿ

**ಲಕ್ಕುಂಡಿ:** ಇಲ್ಲಿಯ ರಾಷ್ಟ್ರೀಯ ಹೆದ್ದಾರಿ ಪಕ್ಕದ ನಿವಾಸಿ ಶಿಕ್ಷಕ ಚಿನ್ನಪ್ಪ ಶಿವಪ್ಪ ಮುಸ್ಕಿನಭಾವಿ (59) ಶನಿವಾರ ನಿಧನರಾದರು. ಮೃತರು ಸರಕಾರಿ ಪ್ರಾಥಮಿಕ ಶಾಲೆಯ ಶಿಕ್ಷಕರಾಗಿದ್ದರು. ಪತ್ನಿ, ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

### ಗಂಗವ್ವ ಲಕ್ಕುಂಡಿ



ಬೆಟಗೇರಿ: ಇಲ್ಲಿನ ಕುಲಕರ್ಣಿ ಗಲ್ಲಿ ನಿವಾಸಿ ಗಂಗವ್ವ ಕೋಂ ನಾಗಪ್ಪ ಲಕ್ಕುಂಡಿ(71) ಜೂ.15 ರಂದು ಶನಿವಾರ ನಿಧನರಾದರು. ಮೃತರು ಡಾ: ಸಂಜಯ ಲಕ್ಕುಂಡಿ ಸೇರಿದಂತೆ ಇಬ್ಬರು ಪುತ್ರರು, ಓರ್ವ ಪುತ್ರಿ ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

ಮೃತರ ಅಂತಿಮಯಾತ್ರೆ ಜೂ.16 ರ ರವಿವಾರ ಮಧ್ಯಾಹ್ನ 12-30ಕ್ಕೆ ಸ್ವಗೃಹದಿಂದ ಹೊರಡಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.



### ಅಣ್ಣಪ್ಪಗೌಡ ಪಾಟೀಲ

ಗದಗ: ಜಿಲ್ಲೆಯ ನರಗುಂದ ಪಟ್ಟಣದ ನಿವಾಸಿ, ಪುರಸಭೆಯ ನಿವೃತ್ತ ನೌಕರ, ಅಣ್ಣಪ್ಪಗೌಡ ಪಾಟೀಲ (ದೊಡ್ಡಮನಿ) (62) ಶನಿವಾರ ಬೆಳಗ್ಗೆ ಹೃದಯಾಘಾತದಿಂದ ನಿಧನರಾದರು. ಮೃತರು ಪತ್ನಿ, ಮಗ, ಮಗಳು, ಸಹೋದರಿಯರು, ಅಳಿಯಂದಿರು ಸೇರಿದಂತೆ ಅಪಾರ ಬಂಧು ಬಳಗವನ್ನು ಹೊಂದಿದ್ದರು.

### ಚಿತ್ರದುರ್ಗದ ರೇಣುಕಾಸ್ವಾಮಿಯ ಹತ್ಯೆಯ ಆರೋಪಿಗಳಿಗೆ

# ಕಠಿಣ ಶಿಕ್ಷೆ ವಿಧಿಸುವಂತೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಚಿತ್ರದುರ್ಗದ ರೇಣುಕಾ ಸ್ವಾಮಿಯ ಬರ್ಬರ ಹತ್ಯೆಯನ್ನು ಖಂಡಿಸಿ, ಹತ್ಯೆಗೈದ ಆರೋಪಿಗಳಿಗೆ ಕಠಿಣ ಶಿಕ್ಷೆ ವಿಧಿಸುವಂತೆ ಅಖಿಲ ಕರ್ನಾಟಕ ಬೇಡ ಜಂಗಮ ಸಮಾಜ ಸಂಸ್ಥೆ ಗದಗ ಜಿಲ್ಲಾ ಘಟಕದ ವತಿಯಿಂದ ಗದಗ ತಹಸೀಲ್ದಾರ ಮುಖಾಂತರ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.



ಮನವಿ ಸಲ್ಲಿಸಿ ಮಾತನಾಡಿದ ಸಂಸ್ಥೆಯ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಶಿದ್ರಾಮಯ್ಯ ಕಟಗಿಹಳ್ಳಿಮಠ, ನಮ್ಮ ಸಮಾಜದವರ ಮೇಲೆ ದುಷ್ಟಶಕ್ತಿಗಳು ಭೀಕರವಾಗಿ ಹತ್ಯೆ ಮಾಡುವ ಘಟನೆಗಳು ಜರುಗುತ್ತಲಿವೆ. ಇತ್ತೀಚಿಗೆ ಹುಬ್ಬಳ್ಳಿಯ ನೇಹಾ ಹಿರೇಮಠ, ಚಿತ್ರದುರ್ಗ ರೇಣುಕಾಸ್ವಾಮಿಯ ಭೀಕರ ಹತ್ಯೆಗಳು ನಡೆದಿದ್ದು, ಚಿತ್ರದುರ್ಗದ ರೇಣುಕಾಸ್ವಾಮಿಯನ್ನು ಮಾರಾಕಾಸ್ತ್ರಗಳಿಂದ ಹಲ್ಲೆ ಮಾಡಿ ಚಿತ್ರಹಿಂಸೆ ನೀಡಿ ಹತ್ಯೆಗೈದು ಚರಂಡಿಯಲ್ಲಿ ಎಸೆದಿರುವ ಪ್ರಕರಣವೂ ಬೆಳಕಿಗೆ ಬಂದಿದೆ. ಈ ದುಷ್ಕರ್ಮಿಗಳಿಗೆ ಆದಷ್ಟು ಬೇಗ ಕಠಿಣ ಶಿಕ್ಷೆ ನೀಡಬೇಕೆಂದು ಮನವಿ ಸಲ್ಲಿಸಿ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಂಗಮ ಸಮಾಜದ ಗೌರವ ಅಧ್ಯಕ್ಷರಾದ ಬಸಯ್ಯ ಸಾಸ್ವಿಹಳ್ಳಿಮಠ, ಶಂಕರಗೌಡ ಭರಮಗೌಡ್ರ, ವೀರಯ್ಯ ಕಂಬಾಳಿಮಠ, ಅಂದಾನಯ್ಯ ವಿರಕ್ತಮಠ, ಅಜಯ ಹಿರೇಮಠ, ಸಂತೋಷ ಹಿರೇಮಠ, ಶಿದ್ರಾಮಯ್ಯ ಹಿರೇಮಠ, ವೀರೇಶ ಹೊಸಮಠ, ಮೃತ್ಯುಂಜಯ ಕುಲಕರ್ಣಿ, ಜಗದೀಶ ಹಿರೇಮಠ ಚಿಕ್ಕಮಣ್ಣೂರ, ಕುಮಾರ ದೇವದುರ್ಗಮಠ ಹಾಗೂ ಕಳಸಾಪೂರ, ಬೆಳಧಡಿ, ನರಸಾಪೂರ, ಸಮಾಜದ ಹಿರಿಯರು, ಯುವಕರು ಉಪಸ್ಥಿತರಿದ್ದರು.

# ದೇಶ ಕಾಯುವ ಸೈನಿಕರನ್ನು ಗೌರವಿಸಿ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ತಮ್ಮ ಜೀವನದ ಹಂಗು ತೊರೆದು ದೇಶದ ರಕ್ಷಣೆ ಮಾಡುವ ಸೈನಿಕರನ್ನು ಗೌರವದಿಂದ ಕಾಣಬೇಕು ಎಂದು ಎಸ್‌ಡಿಎಂಸಿ ಸದಸ್ಯ ಜಿ.ಎಂ. ಗಾಡಿ ಹೇಳಿದರು.



ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕಿ ಎಸ್.ಡಿ. ಪಂಡಿತ ಅವರ ಮಗ ಹರೀಶ ನರೆಗಲ್ಲ ಅವರನ್ನು ಗೌರವಿಸಿ ಮಾತನಾಡಿ, ಹರೀಶ ಅತೀ ಚಿಕ್ಕ ವಯಸ್ಸಿನಲ್ಲಿ ಸೈನ್ಯಕ್ಕೆ ಸೇರಿದ್ದು ನಮಗೆಲ್ಲರಿಗೂ ಹೆಮ್ಮೆಯ ಸಂಗತಿ. ಇಂತಹ ಸೈನಿಕರನ್ನು ನಾವು ಸದಾ ಗೌರವಿಸಬೇಕು ಎಂದರು. ಶಿಕ್ಷಕಿ ವಿ.ಎಂ. ಕಂಠಿ ಮಾತನಾಡಿದರು. ಶಾಲಾ ಪ್ರಧಾನ ಗುರು ಪಿ.ಬಿ. ಕೆಂಚನಗೌಡರ, ಎಸ್‌ಡಿಎಂಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡರ, ಎಂ.ಎಂ. ಮೆಗಲಮನಿ, ಎಂ.ಎಂ. ಕೊಪ್ಪಳ, ಕೆ.ಎಂ. ಹೆರಕಲ್, ಎಚ್.ಆರ್. ಭಜೆಂತ್ರಿ, ಎಸ್.ಎಚ್. ಉಪ್ಪಾರ, ಟಿ.ವೀಣಾ, ಎಸ್.ವಿ. ಹಿರೇಮಠ, ಎಸ್.ಡಿ. ಪಂಡಿತ, ನಂದಾ ಮಟ್ಟಿ, ಜ್ಯೋತಿ ಜಾಧಾವ, ಪವಿತ್ರಾ ಮಟ್ಟಿ, ಶಭಾನಾ ಡಾಲಾಯತ ಇದ್ದರು.

### ಗಾಲಾ ನರ್ಸಿಂಗ್ ಕಾಲೇಜಿನಲ್ಲಿ

# ರಕ್ತದಾನಿಗಳ ದಿನ ಆಚರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ವಿ.ಪಿ. ಗಾಲಾ ಸ್ಕೂಲ್ ಆಫ್ ನರ್ಸಿಂಗ್ ಹಾಗೂ ಇನ್ಸ್ಟಿಟ್ಯೂಟ್ ಆಫ್ ಪ್ಯಾರಾಮೆಡಿಕಲ್ ಸೈನ್ಸ್‌ನಲ್ಲಿ ವಿಶ್ವ ರಕ್ತದಾನಿಗಳ ದಿನವನ್ನು ಆಚರಿಸಲಾಯಿತು.

ಕಾರ್ಯಕ್ರಮ ಉದ್ದೇಶಿಸಿ ಪ್ರಾಂಶುಪಾಲ ಅಮರಯ್ಯ ಚಿನ್ನಯ್ಯನಮಠ ಮಾತನಾಡಿ, ದಾನಗಳಲ್ಲಿ ರಕ್ತದಾನವನ್ನು ಶ್ರೇಷ್ಠ ದಾನವೆಂದು ಕರೆಯಲಾಗುತ್ತಾದೆ. ಈ ಹಿನ್ನೆಲೆಯಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಪ್ರತಿ ವರ್ಷ ಜೂನ್ 14ರಂದು ವಿಶ್ವ ರಕ್ತದಾನಿಗಳ ದಿನವನ್ನಾಗಿ ಘೋಷಿಸಿದೆ. ಈ ಜೀವ ಉಳಿಸುವ ಕಾರ್ಯವಿಧಾನದ ಬಗ್ಗೆ ಜಾಗೃತಿ ಮೂಡಿಸುವ ಸಲುವಾಗಿ ರಕ್ತದಾನವನ್ನು ಉತ್ತೇಜಿಸಲಾಗುತ್ತದೆ ಎಂದರು.

ಮಾನವನ ಜೀವವನ್ನು ಉಳಿಸುವಲ್ಲಿ ರಕ್ತದಾನವು ಒಂದು ಪ್ರಮುಖ ಕಾರ್ಯವಿಧಾನವಾಗಿದೆ. ಇದೊಂದು ಮಹತ್ತರವಾದ ಉಪಕ್ರಮವಾಗಿದ್ದು, ಎಲ್ಲೆಡೆ ಪ್ರೋತ್ಸಾಹ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ಕಾಲೇಜಿನ ಅಧ್ಯಕ್ಷೆ ರಚನಾ ಗಾಲಾ, ಸೆಕ್ರೆಟರಿ ಪಂಕಜ್ ಗಾಲಾ, ನಿರ್ದೇಶಕರಾದ ಗುಂಜನ ಗಾಲಾ, ಕಾಲೇಜಿನ ಎಲ್ಲ ಸಿಬ್ಬಂದಿ ವರ್ಗ, ಎಲ್ಲ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜಿಲ್ಲಾ ಮಟ್ಟದ ಯೋಗ ನಿಬಂಧ ಸ್ಪರ್ಧೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಎಸ್.ವಾಯ್.ಬಿ.ಎಂ.ಎಸ್. ಯೋಗಪಾಠಶಾಲೆಯ ಬಸವ ಯೋಗ ಕೇಂದ್ರ ಮತ್ತು ಗದಗ ಜಿಲ್ಲಾ ಯೋಗ ಒಕ್ಕೂಟ ಹಾಗೂ ಗದಗ ಜಿಲ್ಲಾ ಅಮೆಚೂರ್ ಯೋಗಾಸನ ಕ್ರೀಡಾ ಸಂಸ್ಥೆ ಇವರುಗಳ ಸಹಯೋಗದಲ್ಲಿ ಯೋಗೋತ್ಸವ-24 ಕಾರ್ಯಕ್ರಮಗಳ ಅಡಿಯಲ್ಲಿ ಗದಗ ಜಿಲ್ಲಾ ಮಟ್ಟದ ಯೋಗ ನಿಬಂಧ ಸ್ಪರ್ಧೆ ಆಯೋಜಿಸಲಾಗಿದೆ.

ಸ್ಪರ್ಧೆಯು ಹಿರಿಯ ಪ್ರಾಥಮಿಕ ಶಾಲಾ ವಿದ್ಯಾರ್ಥಿಗಳಿಗಾಗಿ-'ಮಕ್ಕಳಿಗಾಗಿ ಯೋಗ', ಪ್ರೌಢಶಾಲಾ ವಿದ್ಯಾರ್ಥಿಗಳಿಗಾಗಿ-'ಆರೋಗ್ಯಕ್ಕಾಗಿ ಯೋಗ', ಕಾಲೇಜು ವಿದ್ಯಾರ್ಥಿಗಳಿಗಾಗಿ-'ವಿದ್ಯಾರ್ಥಿಗಳಿಗೆ ಯೋಗದ ಅಗತ್ಯತೆ' ವಿಷಯಗಳ ಕುರಿತು ನಡೆಯಲಿದೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು ನಿಬಂಧ ವಿಷಯವನ್ನು ಎ4 ಅಳತೆಯ ಹಾಳೆಯಲ್ಲಿ ಕನ್ನಡ ಇಲ್ಲವೆ ಇಂಗ್ಲೀಷ ಭಾಷೆಯಲ್ಲಿ ಬರೆದು, ಜೂನ್ 19ರೊಳಗೆ-ಪ್ರಾಚಾರ್ಯರು, ಬಸವ ಯೋಗ ಮಹಾವಿದ್ಯಾಲಯ (ಬಸವೇಶ್ವರ ಪ್ರೌಢಶಾಲೆ ಆವರಣ), ಸಿದ್ಧಲಿಂಗ ನಗರ, ಗದಗ ಇವರಿಗೆ ತಲುಪಿಸಬೇಕು. ಪ್ರವೇಶ ಉಚಿತವಾಗಿದೆ.

ಹೆಚ್ಚಿನ ಮಾಹಿತಿಗಾಗಿ-9448317188 ಸಂಪರ್ಕಿಸಬಹುದು. ಆಸಕ್ತರು ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಸಂಘಟಿಕರ ಪರವಾಗಿ ಬಸವ ಯೋಗ ಮಹಾವಿದ್ಯಾಲಯದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಪತ್ರಿಕಾ ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಹಳ್ಳಿಗಳಲ್ಲಿ ಪ್ರವಾಹದ ಬಗ್ಗೆ ಜಾಗೃತಿ ಮೂಡಿಸಿ




**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಜಿಲ್ಲೆಯ ಎರಡು ಪ್ರಮುಖ ಹಳ್ಳಗಳಾದ ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಹರಿಯುವ ಮಾರ್ಗದ ಗ್ರಾಮಗಳಲ್ಲಿ ಪ್ರವಾಹದ ಕುರಿತು ಜಾಗೃತಿ ಮೂಡಿಸಬೇಕು ಮತ್ತು ಪ್ರವಾಹ ಉಂಟಾದಲ್ಲಿ ಜನ-ಜಾನುವಾರು ರಕ್ಷಣೆಗೆ ಅಗತ್ಯ ಸಿದ್ಧತೆಗಳನ್ನು ಮಾಡಿಕೊಳ್ಳಬೇಕೆಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆಗಿರುವ ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ ಜರುಗಿಸಿ ಮಾತನಾಡಿದರು.

ಹವಾಮಾನ ಇಲಾಖೆ ಮಾಹಿತಿ ಪ್ರಕಾರ ಮುಂದಿನ ದಿನಗಳಲ್ಲಿ ಮಳೆ ಹೆಚ್ಚಳವಾಗುವ ಸಾಧ್ಯತೆ ಇದೆ. ತುಪ್ಪರಿಹಳ್ಳ ಮತ್ತು ಬೆಣ್ಣಿಹಳ್ಳ ಪ್ರವಾಹ ಉಂಟುಮಾಡಬಹುದು. ತಹಸೀಲ್ದಾರರು ಗ್ರಾಮಗಳಿಗೆ ಭೇಟಿ ನೀಡಿ, ಪ್ರವಾಹದಿಂದ ಹಾನಿ ಆಗದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಆರೋಗ್ಯ ಇಲಾಖೆ ಗ್ರಾಮಗಳಲ್ಲಿ ಫಾಗಿಂಗ್ ವ್ಯವಸ್ಥೆ ಮಾಡಬೇಕು. ಆಶಾ ಕಾರ್ಯಕರ್ತೆಯರು ಹಾಗೂ ಆರೋಗ್ಯ ಇಲಾಖೆ ಸಿಬ್ಬಂದಿಗಳು ಸಾಂಕ್ರಾಮಿಕ ರೋಗಗಳ ಬಗ್ಗೆ ಜನರಲ್ಲಿ ಅರಿವು ಮೂಡಿಸಬೇಕೆಂದು ತಿಳಿಸಿದರು. ಜಿಲ್ಲೆಯಲ್ಲಿ ಜೂನ್ 12 ರವರೆಗೆ 1.17 ಲಕ್ಷ ಹೆಕ್ಟರ್ ಭೂಮಿ ಬಿತ್ತನೆ ಆಗಿದೆ. ಕೃಷಿ ಇಲಾಖೆ ಅಧಿಕಾರಿಗಳು ಬಿತ್ತನೆ ಆಗಿರುವ ಬೆಳೆಗಳ ನಿರ್ವಹಣೆ ಮತ್ತು ಸಂರಕ್ಷಣೆಗೆ ಅಗತ್ಯ ಸಲಹೆಗಳನ್ನು ರೈತರಿಗೆ ನೀಡಬೇಕೆಂದು ಅವರು ಹೇಳಿದರು. ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ 56243 ಮೆಟ್ರಿಕ್ ಟನ್ ವಿವಿಧ ರಸಗೊಬ್ಬರಗಳ ಬೇಡಿಕೆ ಇದ್ದು, ಏಪ್ರಿಲ್‌ನಿಂದ ಇಲ್ಲಿಯವರೆಗೆ 29135.74 ಮೆಟ್ರಿಕ್ ಟನ್ ವಿವಿಧ ರಸಗೊಬ್ಬರಗಳು ಮಾರಾಟವಾಗಿದೆ. ಈಗ 26298.14 ಮೆಟ್ರಿಕ್ ರಸ ಗೊಬ್ಬರಗಳ ದಾಸ್ತಾನು ಇದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದರು.

ಸಭೆಯಲ್ಲಿ ಉಪವಿಭಾಗಾಧಿಕಾರಿಗಳು, ತಹಸೀಲ್ದಾರರು, ಪಶುಪಾಲನೆ, ಅಗ್ನಿಶಾಮಕ, ಆರೋಗ್ಯ, ಮಹಾನಗರ ಪಾಲಿಕೆ, ಲೋಕೋಪಯೋಗಿ, ಸಣ್ಣ ನೀರಾವರಿ ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.

# ಯೋಗ ಮಾನಸಿಕ ಸದೃಢತೆಗೆ ಸಹಕಾರಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರ, ಜಿಲ್ಲಾಡಳಿತ ಗದಗ, ಆಯುಷ್ ಮಂದಿರ, ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯದಲ್ಲಿ 10ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆ ಕುರಿತು ಪೂರ್ವಭಾವಿ ಸಭೆ, ಯೋಗೋತ್ಸವ ಕಾರ್ಯಕ್ರಮ ಮತ್ತು ಆಯುಷ್ ಪರಿಚಯ ಕುರಿತು ಕಾರ್ಯಕ್ರಮ ಆಯೋಜಿಸಲಾಗಿತ್ತು.

ಗದಗ ಜಿಲ್ಲಾ ಆಯುಷ್ ವೈದ್ಯಾಧಿಕಾರಿ ಡಾ. ಮಲ್ಲಿಕಾರ್ಜುನ ಎಸ್. ಉಪ್ಪಿನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ವಿಶ್ವವಿದ್ಯಾಲಯದ ಹಾಗೂ ಜಿಮ್ಸ್ ಆಸ್ಪತ್ರೆಯ ವೈದ್ಯಕೀಯ ವಿದ್ಯಾರ್ಥಿಗಳು ಒಂದೆಡೆ ಸೇರಿ ಜಿಲ್ಲಾ ಆಯುಷ್ ಇಲಾಖೆ ಆಯೋಜಿಸಿರುವ ಈ ಕಾರ್ಯಕ್ರಮದಲ್ಲಿ ಭಾಗವಹಿಸಿರುವುದು ಸಂತಸ ತಂದಿದೆ. ಇದೇ ರೀತಿ ಜೂನ್ 21ರಂದು ನಡೆಯುವ ಜಿಲ್ಲಾಮಟ್ಟದ ಯೋಗ ಶಿಬಿರದಲ್ಲಿ ಎಲ್ಲರೂ ಪಾಲ್ಗೊಂಡು ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕೆಂದು ಕರೆ ನೀಡಿದರು. ಆಯುರ್ವೇದದಿಂದ ಮತ್ತು ಯೋಗವು ನಮಗೆ ಮಾನಸಿಕ ಸ್ಥಿರತೆ ನೀಡಿ, ಯಾವುದೇ ಒತ್ತಡವನ್ನು ಎದುರಿಸುವ ಶಕ್ತಿಯನ್ನು ನೀಡುತ್ತದೆ. ಯೋಗದಿಂದ ಆರೋಗ್ಯದ ಯೋಗ್ಯತೆ ಕಾಪಾಡಿಕೊಳ್ಳಬಹುದು. ಮಾನವನ ಆಂತರಿಕ ಮತ್ತು ಬಾಹ್ಯ ಸೌಂದರ್ಯ ಯೋಗ ಅತ್ಯಂತ ಪರಿಣಾಮಕಾರಿಯಾಗಿದ್ದು, ಇದರಿಂದ ಸೌಂದರ್ಯ ವೃದ್ಧಿಯಾಗುತ್ತದೆ ಎಂದರು. ಕಾರ್ಯಕ್ರಮದಲ್ಲಿ ಡಾ. ಅಶೋಕ ಮತ್ತಿಗಟ್ಟಿ, ಡಾ. ಸಾಯಿಪ್ರಕಾಶ, ಡಾ. ಕಮಲಾಕರ, ಡಾ. ಸಂಜೀವ ನಾರಪ್ಪನವರ ಸೇರಿದಂತೆ ಗ್ರಾಮೀಣ ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು, ಜಿಮ್ಸ್ ವೈದ್ಯಕೀಯ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಬಸವದಳದ ಚುಂಚಾ ಯೋಗ ತರಬೇತಿದಾರರಾಗಿ ಭಾಗವಹಿಸಿ ಯೋಗದ ಕೆಲವು ಆಸನಗಳನ್ನು ತಿಳಿಸಿದರು.

'ಸಾರ್ವಜನಿಕ ಆಡಳಿತ ಮತ್ತು ಉತ್ತಮ ಆಡಳಿತದಲ್ಲಿ ವಕೀಲರ ಪಾತ್ರ'ದ ಕುರಿತು ವಕೀಲರೊಂದಿಗೆ ಸಂವಾದ

# ಲೋಕಾಯುಕ್ತ ಕಾನೂನುಗಳನ್ನು ಅರಿಯಿರಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಮಹತ್ವದ ಕಾನೂನು ರಚನೆ, ತಿದ್ದುಪಡಿಯಲ್ಲಿ ವಕೀಲರ ಪಾತ್ರ ಪ್ರಮುಖವಾಗಿದೆ ಎಂದು ಕರ್ನಾಟಕ ರಾಜ್ಯ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯ ಸಂಕೀರ್ಣದ ಜಿಲ್ಲಾ ವಕೀಲರ ಸಂಘದ ಸಭಾಂಗಣದಲ್ಲಿ ಶನಿವಾರ 'ಸಾರ್ವಜನಿಕ ಆಡಳಿತ ಮತ್ತು ಉತ್ತಮ ಆಡಳಿತದಲ್ಲಿ ವಕೀಲರ ಪಾತ್ರ'ದ ಕುರಿತು ವಕೀಲರೊಂದಿಗೆ ಸಂವಾದ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಕೀಲರು ಸಮಾಜಕ್ಕೆ ಹತ್ತಿರವಿರುವ ಲೋಕಾಯುಕ್ತ ಕಾನೂನುಗಳ ಬಗ್ಗೆ ಅರಿಯಬೇಕು. ಇದರಿಂದ ಸಮಾಜದ ಸರ್ವರಿಗೂ ಸಹಾಯ ಮಾಡಲು ಅವಕಾಶವಿದೆ. ಸಂವಿಧಾನಕ್ಕೆ ವಿರುದ್ಧವಾದ ಯಾವುದೇ ಕಾನೂನು ದೇಶದಲ್ಲಿ ಇಲ್ಲ. ಸಮಾಜದಲ್ಲಿ ಎಲ್ಲರಿಗೂ ಉತ್ತಮ ಜೀವನ ನಡೆಸಬೇಕು ಎಂಬುದೇ ಸಂವಿಧಾನದ ಆಶಯ. ಆ ನಿಟ್ಟಿನಲ್ಲಿ ನಾವೆಲ್ಲರೂ ಶ್ರಮಿಸೋಣ ಎಂದರು.

ಸಾರ್ವಜನಿಕ ನೌಕರರ ಕರ್ತವ್ಯ, ದುರ್ನಡತೆಗೆ ಸಂಬಂಧಿಸಿದ ದೂರುಗಳನ್ನು ಪರಿಶೀಲಿಸಲು ಮತ್ತು ವರದಿ ಮಾಡಲು ಸ್ಥಾಪಿಸಲಾಗಿರುವ ಸಂಸ್ಥೆಯೇ ಕರ್ನಾಟಕ ಲೋಕಾಯುಕ್ತ ಸಂಸ್ಥೆ. ಸಾರ್ವಜನಿಕ ಆಡಳತದಲ್ಲಿ ಗುಣಮಟ್ಟಗಳನ್ನು ಸುಧಾರಿಸುವುದು, ಸಾರ್ವಜನಿಕ/ಸರ್ಕಾರಿ ನೌಕರರ ದುರ್ನಡತೆಯಿಂದ ಸಂಭವಿಸಿದ ಕುಂದುಕೊರತೆಗಳನ್ನು ನಿವಾರಣೆ ಮಾಡುವುದು,



ತಪ್ಪಿತಸ್ಥರ ವಿರುದ್ಧ ಶಿಸ್ತಿನ ಕ್ರಮಕ್ಕೆ ಸರ್ಕಾರಕ್ಕೆ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡುವುದು ಈ ಸಂಸ್ಥೆಯ ಧ್ಯೇಯೋದ್ದೇಶವಾಗಿದೆ ಎಂದರು.

ಯಾವುದೇ ವ್ಯಕ್ತಿ ಕರ್ನಾಟಕ ರಾಜ್ಯದ ಆಡಳಿತ ನಿರ್ವಹಣೆಯಲ್ಲಿ ನಡೆದಿದೆ ಎಂದು ಹೇಳುವ ಭ್ರಷ್ಟಾಚಾರ, ಸ್ವಜನ ಪಕ್ಷಪಾತ, ದುರ್ನಡತೆ, ಅಶಿಸ್ತು ಮತ್ತು ಕರ್ತವ್ಯ ಲೋಪದ ಪ್ರಕರಣಗಳಿಗೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯದ ಸಾರ್ವಜನಿಕ, ಸರ್ಕಾರಿ ನೌಕರರ ವಿರುದ್ಧ ಮಾತ್ರ ದೂರು ನೀಡಬಹುದಾಗಿದೆ ಮಾಹಿತಿ ಒದಗಿಸಿದರು.

ಒಂದು ವಾಣಿಜ್ಯ ಸಂಸ್ಥೆಯು ತನ್ನ ಯಾವುದೇ ವ್ಯವಹಾರಕ್ಕೆ ಸಂಬಂಧಿಸಿದಂತೆ ಅಕ್ರಮ ಅನುಕೂಲವನ್ನು ಪಡೆಯಲು ಸಾರ್ವಜನಿಕ ನೌಕರನಿಗೆ ಅನಗತ್ಯ ಪ್ರಯೋಜನವನ್ನು ನೀಡುವುದು ಅಥವಾ ನೀಡುವುದಾಗಿ ಭರವಸೆ ಕೊಡುವುದು ಮಾಡಿದರೆ ಇಂತಹ ಸಂಸ್ಥೆಯು ಸಹ ಅಪರಾಧವೆಸಗಿದಂತಾಗಿ ಸಂಸ್ಥೆಯ ಮತ್ತು ಸಂಸ್ಥೆಗೆ ಸಂಬಂಧಪಟ್ಟ ಕರ್ತವ್ಯ ಲೋಪವೆಸಗಿದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಲು ಅವಕಾಶವಿರುತ್ತದೆ ಎಂದು ತಿಳಿಸಿದರು.

ಮುಖ್ಯ ಅತಿಥಿಗಳಾಗಿ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಬಸವರಾಜ, ಕರ್ನಾಟಕ ಲೋಕಾಯುಕ್ತ ಸಂಪನ್ಮೂಲ ಅಧಿಕಾರಿ ಪ್ರಕಾಶ ಎಲ್.ನಾಡಗೇರ, ಕರ್ನಾಟಕ ಲೋಕಾಯುಕ್ತ ಉಪನಿಬಂಧಕರಾದ ಅಮರನಾರಾಯಣ ಕೆ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಕಿರಣ ಪಿ.ಎಂ. ಪಾಟೀಲ, ಕರ್ನಾಟಕ ಲೋಕಾಯುಕ್ತ ಗದಗ ಕಚೇರಿಯ ಪೊಲೀಸ್ ಅಧೀಕ್ಷಕ ಸತೀಶ ಚಿಟಗುಬ್ಬಿ, ಜಿಲ್ಲಾ ಗ್ರಾಹಕರ ವೇದಿಕೆ ಅಧ್ಯಕ್ಷ ರಾಚಪ್ಪ ತಾಳಿಕೋಟೆ, ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರ ಜಿ.ಎಸ್. ಪಲ್ಲೇದ ಇದ್ದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿ ಪಾಟೀಲ ವಹಿಸಿದ್ದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಂಗ ಘಟಕ ಮತ್ತು ವಕಿಲರ ಸಂಘಗಳ ಸಹಯೋಗದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಯಾವುದೇ ವ್ಯಕ್ತಿ, ಸಾರ್ವಜನಿಕ, ಸರ್ಕಾರಿ ನೌಕರ ತನ್ನ ಕರ್ತವ್ಯ ಮಾಡದೇ ಇರಲು ಅಥವಾ ಅನುಚಿತವಾಗಿ ಅಥವಾ ಅಪ್ರಮಾಣಿಕವಾಗಿ ಮಾಡಲು ಭ್ರಷ್ಟ ಅಥವಾ ಕಾನೂನು ಬಾಹಿರ ವಿಧಾನಗಳಿಂದ ಅಥವಾ ತನ್ನ ವೈಯಕ್ತಿಕ ಪ್ರಭಾವವನ್ನು ಚಲಾಯಿಸಿ ಆ ಸಾರ್ವಜನಿಕ ನೌಕರನನ್ನು ಪ್ರೇರೇಪಿಸುವುದು ಮತ್ತು ಯಾವುದೇ ವ್ಯಕ್ತಿಗೆ ಅನಗತ್ಯ ಪ್ರಯೋಜನ ನೀಡಲು ಅಥವಾ ತನಗಾಗಿಯೇ ಬೇರೊಬ್ಬ ವ್ಯಕ್ತಿಯಿಂದ ಇನಾಮು ಪಡೆದರೆ, ಪಡೆಯುವುದಕ್ಕೆ ಪ್ರಯತ್ನಿಸಿದರೆ ಅಥವಾ ಸ್ವೀಕಲಿಸಿದರೆ ಅದು ಶಿಕ್ಷಾರ್ಹ ಅಪರಾಧವಾಗುತ್ತದೆ ಎಂದು ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ವಿವರಿಸಿದರು.

# ಪ್ರತಿಯೊಬ್ಬರೂ ರಕ್ತದಾನಕ್ಕೆ ಮುಂದಾಗಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಘಟಕ, ಜಿಲ್ಲಾ ವಾರ್ತಾ ಮತ್ತು ಪ್ರಚಾರ ಇಲಾಖೆ, ಜಿಮ್ಸ್ ರಕ್ತನಿಧಿ ಕೇಂದ್ರ ಹಾಗೂ ವೈದ್ಯಕೀಯ ವಿಜ್ಞಾನ ಸಂಸ್ಥೆ ಜಿಲ್ಲಾ ಆಸ್ಪತ್ರೆ ಗದಗ ಇವರುಗಳ ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನದ ಸಮಾರಂಭ, ರಕ್ತದಾನ ಶಿಬಿರ ಆಯೋಜಿಸಲಾಗಿತ್ತು.

ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಏಡ್ಸ್ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕೆ, ರಕ್ತದಾನ ಶ್ರೇಷ್ಠದಾನ, ರಕ್ತದಾನ ಜೀವದಾನ, ರಕ್ತದಾನ ಮಹಾದಾನ ಎನ್ನುವಂತೆ ಎಲ್ಲರೂ ಮೂರು ತಿಂಗಳಿಗೆ ಒಂದು ಸಾರಿ ರಕ್ತದಾನ ಮಾಡಬಹುದು. ರಕ್ತದಾನ ಮಾಡುವುದರಿಂದ ದೇಹದಲ್ಲಿ ಹೊಸ ರಕ್ತ ಉತ್ಪತ್ತಿಯಾಗಿ ದೇಹದಲ್ಲಿ ಚೈತನ್ಯ ಬರುವುದು. ಎಲ್ಲರೂ ರಕ್ತದಾನ ಮಾಡಿ ರಕ್ತದ ಕೊರತೆಯನ್ನು ನೀಗಿಸುವಲ್ಲಿ ಕೈ ಜೋಡಿಸಬೇಕೆಂದರು.




ರಕ್ತದಾನದಿಂದ ದಾನಿಯ ದೇಹದಲ್ಲಿ 24 ಗಂಟೆಯೊಳಗಾಗಿ ಹೊಸ ರಕ್ತ ಉತ್ಪತ್ತಿ ಪ್ರಾರಂಭವಾಗುತ್ತದೆ. ರಕ್ತದಾನದಿಂದ ಕೊಬ್ಬಿನಾಂಶವನ್ನು ಕಡಿಮೆಯಾಗುತ್ತದೆ. ಹೃದಯ ರೋಗವನ್ನು ಕಡಿಮೆ ಮಾಡುತ್ತದೆ. ಜ್ಞಾಪಕ ಶಕ್ತಿಯನ್ನು ವೃದ್ಧಿಸುತ್ತದೆ. ಇಷ್ಟೆಲ್ಲಾ ಲಾಭಗಳಿರುವುದರಿಂದ ಪ್ರತಿಯೊಬ್ಬರಿಗೂ ರಕ್ತದಾನ ಮಾಡಲು ಕರೆ ನೀಡಿದರು.


ಇದೇ ಸಂದರ್ಭದಲ್ಲಿ ಹೆಚ್ಚು ಬಾರಿ ರಕ್ತದಾನ ಮಾಡಿದ ಮಾಲತೇಶ, ಮಂಜುನಾಥ, ಲಕ್ಕಪ್ಪ, ಮಲ್ಲೇಶ, ಪವನ್ ಇವರನ್ನು ಸನ್ಮಾನಿಸಲಾಯಿತು. ರಕ್ತದಾನ ಶಿಬಿರದಲ್ಲಿ 50ಕ್ಕೂ ಹೆಚ್ಚು ರಕ್ತದ ಯುನಿಟ್‌ಗಳನ್ನು ಸಂಗ್ರಹಿಸಲಾಯಿತು. ಜಿಮ್ಸ್ ರಕ್ತನಿಧಿ ಕೇಂದ್ರದ ಡಾ. ಮೋನಿಕಾ, ರಕ್ತನಿಧಿ ಕೇಂದ್ರದ ವೈದ್ಯಾಧಿಕಾರಿ ಡಾ. ಮಹೇಶ ಪಾಟೀಲ ಮಾತನಾಡಿದರು.

ಸಮಾರಂಭದಲ್ಲಿ ಡಾ. ಈಶ್ವರ ಸಿಂಗ್, ಡಾ. ಶಕುಂತಲಾ ಅರಮನಿ, ಡಾ. ಮಲ್ಲಿಕಾರ್ಜುನ, ಎಸ್.ಬಿ ಪಾಟೀಲ, ವೆಂಕಟೇಶ, ಫಿರೋಜ, ಕೃಷ್ಣಾ, ವಿರೂಪಾಕ್ಷಿ, ಅನ್ನಪೂರ್ಣಾ ಹಾಗೂ ಸಿಬ್ಬಂದಿಗಳು ಹಾಜರಿದ್ದರು.

ಮೋದಿನವರ ಸ್ವಾಗತಿಸಿದರು. ಬಸವರಾಜ ಲಾಲಗಟ್ಟಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಅಯ್ಯಾಚಾರ ಲಿಂಗದೀಕ್ಷೆ ಇಂದು

**■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**




ಇಲ್ಲಿಯ ಅಂಬೇಡ್ಕರ ನಗರದ ಮರುಳಸಿದ್ದೇಶ್ವರ ಮಠದಲ್ಲಿ ಅಯ್ಯಾಚಾರ, ಲಿಂಗದೀಕ್ಷೆ ಕಾರ್ಯಕ್ರಮವು ಜೂನ್ 16ರಂದು ಜರುಗಲಿದೆ.

ಬೆಳಿಗ್ಗೆ 5ಕ್ಕೆ ಮರುಳಸಿದ್ದೇಶ್ವರ ಸ್ವಾಮಿಗೆ ರುದ್ರಾಭಿಷೇಕ, ಬಿಲ್ವಾರ್ಚನೆ ಸೇರಿದಂತೆ ವಿಶೇಷ ಪೂಜೆ ನಡೆಯಲಿದೆ. ನಂತರ ಅಯ್ಯಾಚಾರ ಲಿಂಗದೀಕ್ಷೆ ಕಾರ್ಯಕ್ರಮವು ನಡೆಯಲಿದ್ದು,

ಚಿತ್ರದುರ್ಗದ ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸುವರು. ಹೀರೇಮಠದ ಬೆನಹಾಳದ ಸದಾಶಿವ ಶಿವಾಚಾರ್ಯರು, ಸವಡಿಯ ಮರುಳಸಿದ್ಧೇಶ್ವರಮಠದ ಮರುಳಸಿದ್ಧೇಶ್ವರ ಶ್ರೀಗಳು, ಹಂಪಿಯ ಮಾತಂಗಮುನಿ ಆಶ್ರಮದ ಪೂರ್ಣಾನಂದ ಭಾರತಿ ಸ್ವಾಮೀಜಿಗಳು, ಬಿಸರಳ್ಳಿಯ ಶಿವಯ್ಯಸ್ವಾಮಿಗಳು, ಮಳ್ಳಯ್ಯ ಶ್ರೀಗಳು, ಲಕ್ಕುಂಡಿ ಮರುಳಸಿದ್ದೇಶ್ವರಮಠದ ಹುಚ್ಚಯ್ಯ ಸ್ವಾಮೀಜಿ, ಇಟಗಿಯ ಗದಿಗೆಪ್ಪಜ್ಜನವರು, ಶಿವಮನಿ ಸ್ವಾಮೀಜಿ, ಮಳ್ಳಪ್ಪ ಶ್ರೀಗಳು, ಉಪಸ್ಥಿತರಿರುವರು.

ಗ್ರಾ.ಪಂ ಅಧ್ಯಕ್ಷ ಕೆ.ಎಸ್. ಪೂಜಾರ ಅಧ್ಯಕ್ಷತೆ ವಹಿಸುವರು. ಗದಗ ಜಿಲ್ಲಾ ವಿಭಾಗ ಮಟ್ಟದ ಎಸ್.ಸಿ-ಎಸ್.ಟಿ ದೌರ್ಜನ್ಯ ನಿಯಂತ್ರಣ ಸಮಿತಿಯ ಸದಸ್ಯ ಬಸವರಾಜ ಡಿ.ಮುಳ್ಳಾಳ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು ಎಂದು ಪ್ರಕಟಣೆ ತಿಳಿಸಿದೆ.



ಶಾಸಕ ಡಾ. ಚಂದ್ರು ಲಮಾಣಿ ಶನಿವಾರ ಬೆಂಗಳೂರಿನಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ, ಸಂಸದರಾದ ಬಸವರಾಜ ಬೊಮ್ಮಾಯಿ, ಕೋಟ ಶ್ರೀನಿವಾಸ ಪೂಜಾರಿ, ವಿಪ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಭೇಟಿ ಮಾಡಿ ಕ್ಷೇತ್ರದ ಅಭಿವೃದ್ಧಿಯ ಬಗ್ಗೆ ಚರ್ಚಿಸಿದರು. ಕ್ಷೇತ್ರ ವ್ಯಾಪ್ತಿಯಲ್ಲಿನ ಕಾರವಾರ-ಇಳಕಲ್ ರಜ್ಯ ಹೆದ್ದಾರಿ ಅಭಿವೃದ್ಧಿ, ನೀರಾವರಿ, ರೇಲ್ವೆ ಯೋಜನೆ ಸೇರಿ ಮುಖ್ಯವಾಗಿ ಆಗಬೇಕಾಗಿರುವ ಕಾರ್ಯಗಳ ಬಗ್ಗೆ ಮನವಿ ಮಾಡಿದರು.

# ಬಾರ್ ಸ್ಥಳಾಂತರಿಸಲು ಮನವಿ

**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ವಾರ್ಡ್ ನಂ 17, 1 ವ್ಯಾಪ್ತಿಯಲ್ಲಿ ಪ್ರಾರಂಭಗೊಳ್ಳುತ್ತಿರುವ ಬಾರ್ & ರೆಸ್ಟೋರೆಂಟ್‌ನ್ನು ಸ್ಥಳಾಂತರಿಸಬೇಕು ಎಂದು ಶನಿವಾರ ಇಲ್ಲಿನ ನಿವಾಸಿಗಳು ಜಿಲ್ಲಾ ಅಬಕಾರಿ ಅಧಿಕಾರಿಗಳು ಮತ್ತು ಲೋಕಾಯುಕ್ತರಿಗೆ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ, ಬಾರ್ ಹತ್ತಿರವೇ ನೂರಾರು ಬಡ ಕುಟುಂಬಗಳು, ಎಪಿಎಂಸಿ ಮಾರುಕಟ್ಟೆಯ ಹಮಾಲರ ಮತ್ತು ಕುರಿ/ಉಣ್ಣೆ ಔದ್ಯೋಗಿಕ ಸಹಕಾರಿ ಸಂಘದ ವಸತಿ ಮನೆಗಳು, ಈಶ್ವರ ದೇವಸ್ಥಾನ, ಆಕ್ಸ್‌ಫರ್ಡ್ ಶಾಲೆ, ಡಿ.ದೇವರಾಜ್ ಅರಸು ಬಾಲಕ ಮತ್ತು ಬಾಲಕಿಯರ ವಸತಿ ನಿಲಯ, ಆಸ್ಪತ್ರೆ ಸಮೀಪವೇ ಬಿ.ಸಿ.ಎನ್ ಕಾಲೇಜು ಇದೆ.



ಇಲ್ಲಿ ಬಾರ್ ಪ್ರಾರಂಭವಾದರೆ ಜನರ ನಿತ್ಯದ ಬದುಕಿಗೆ ತೊಂದರೆಯಾಗುತ್ತದೆ ಮತ್ತು ಇಡೀ ವಾತಾವರಣ, ಕುಟುಂಬಗಳು ಹಾಳಾಗುತ್ತವೆ. ಯುವಕರು ಮದ್ಯವ್ಯಸನಿಗಳಾಗುತ್ತಾರೆ. ಇಲ್ಲಿ ಬಾರ್ ಬೇಡ ಎಂದು ಕಳೆದ ಒಂದೂವರೆ ವರ್ಷದಿಂದ ಹೋರಾಟ ಮಾಡುತ್ತಲೇ ಬರಲಾಗಿದೆ. ಈ ಸ್ಥಳದಲ್ಲಿ ಬಾರ್ ಪ್ರಾರಂಭಿಸಲು ಅನುಮತಿ ನೀಡದೇ ಬಾರ್ ಸ್ಥಳಾಂತರಿಸಬೇಕು ಎಂದು ಮನವಿಯಲ್ಲಿ ಒತ್ತಾಯಿಸಿದ್ದಾರೆ. ಈ ವೇಳೆ ನಿವಾಸಿಗಳಾದ ಮಂಜುನಾಥ ಮುಳಗುಂದ, ಮಾಂತೇಶ ಗುದ್ಯಾಳ, ಭರಮಣ್ಣ ಶರಸೂರಿ, ಲೆಂಕೆಪ್ಪ ಶರಸೂರಿ, ಮಾಂತಪ್ಪ ಗದ್ದಿ, ಮಂಜುನಾಥ ಹವಳಣ್ಣವರ, ಮಾಂತೇಶ ಗದ್ದಿ, ನೀಲಪ್ಪ ಹುರಕನವರ ಸೇರಿ ಹಲವರಿದ್ದರು.

# ಬಡ್ನಿ-ಆದ್ರಳ್ಳಿ ರಸ್ತೆ ಸಂಪರ್ಕಕ್ಕೆ ತಾತ್ಕಾಲಿಕ ವ್ಯವಸ್ಥೆ



**■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**


ಕಳೆದ 10-12 ದಿನಗಳ ಹಿಂದೆ ಸುರಿದ ಭಾರೀ ಮಳೆಗೆ ತಾಲೂಕಿನ ಪು.ಬಡ್ನಿ-ಆದರಹಳ್ಳಿ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಸೇತುವೆ ಸಮೇತ ಕೊಚ್ಚಿ ಹೋಗಿ ಗ್ರಾಮಗಳ ಸಂಪರ್ಕ ಕಡಿತಗೊಂಡಿತ್ತು. ಸ್ಥಳಕ್ಕೆ ಶಾಸಕ ಡಾ. ಚಂದ್ರು ಲಮಾಣಿ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್ ಭೇಟಿ ನೀಡಿ ಪರಿಶೀಲಿಸಿ, ಕೂಡಲೇ ತಾತ್ಕಾಲಿಕ ರಸ್ತೆ ನಿರ್ಮಿಸಿ ಸಾರ್ವಜನಿಕರಿಗೆ ಸಂಪರ್ಕಕ್ಕೆ ವ್ಯವಸ್ಥೆ ಕಲ್ಪಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದ್ದರು.

ಈ ಹಿನ್ನೆಲೆಯಲ್ಲಿ ಪಿಡಬ್ಲ್ಯುಡಿ ಅಧಿಕಾರಿಗಳು ರಸ್ತೆಗೆ ಮೊರಂ ಹಾಕಿ ರಸ್ತೆ ಸಂಪರ್ಕ ಕಲ್ಪಿಸುವ ಕೆಲಸ ಮಾಡಿದ್ದಾರೆ. ಈ ಕಾರ್ಯಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತವಾಗಿದ್ದು, ಆದಷ್ಟು ಬೇಗ ಸೇತುವೆ ಮತ್ತು ರಸ್ತೆ ದುರಸ್ತಿ ಮಾಡಿಸಿ ಶಾಶ್ವತ ಪರಿಹಾರ ಕಲ್ಪಿಸಬೇಕೆಂಬುದು ಸಾರ್ವಜನಿಕರ ಒತ್ತಾಸೆಯಾಗಿದೆ.

# ಮದನಮೋಹನ್ ಮತ್ತಿಹಳ್ಳಿ ನಿಧನಕ್ಕೆ ಸಂತಾಪ

**■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಹಿರಿಯಪತ್ರಕರ್ತ ಮದನಮೋಹನ್ ಮತ್ತಿಹಳ್ಳಿ ಅವರ ನಿಧನಕ್ಕೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.



ತಮ್ಮ ಶೋಕ ಸಂದೇಶದಲ್ಲಿ ಅವರು, 'ದಿ ಹಿಂದು' ಪತ್ರಿಕೆಯಲ್ಲಿ ಸುಮಾರು ನಾಲ್ಕು ದಶಕಗಳ ಕಾಲ ಸೇವೆ ಸಲ್ಲಿಸಿ ನಿವೃತ್ತರಾಗಿದ್ದ ಮದನ್ ಮೋಹನ್ ಅವರು ನಾಡಿನ ಅದರಲ್ಲೂ ವಿಶೇಷವಾಗಿ ಉತ್ತರ ಕರ್ನಾಟಕ ಭಾಗದ ಸಮಸ್ಯೆ-ಸಂಕಷ್ಟಗಳ ಬಗ್ಗೆ ಬರೆಯುತ್ತಿದ್ದ ಮಾಹಿತಿಪೂರ್ಣ ಲೇಖನಗಳು, ಕಟು ವಿಮರ್ಶೆಯ ವರದಿ-ವಿಶ್ಲೇಷಣೆಗಳು ಸರ್ಕಾರಗಳ ಹಾಗೂ ಸಮಾಜದ ಕಣ್ತೆರೆಸುವಂತಿದ್ದವು ಎಂದು ಮದನಮೋಹನ ಅವರ ಪತ್ರಿಕೋದ್ಯಮದ ಸೇವೆಯನ್ನು ಕೊಂಡಾಡಿದ್ದಾರೆ. ಅವರ ಕಾರ್ಯಶೈಲಿ, ವೃತ್ತಿಬದ್ಧತೆ ಇಂದಿನ ಯುವ ಪತ್ರಕರ್ತರಿಗೆ ಪ್ರೇರಣೆಯಾಗಿದೆ ಎಂದು ಹೊರಟ್ಟಿ ತಿಳಿಸಿದ್ದು, ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಭಗವಂತ ಮದನಮೋಹನ್ ಅವರ ಕುಟುಂಬದ ಸದಸ್ಯರಿಗೆ ಹಾಗೂ ಅವರ ಬಳಗಕ್ಕೆ ನೀಡಲಿ ಎಂದು ಪ್ರಾರ್ಥಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka